ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 125 Saturday **31-10-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 125 ಶನಿವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಒಂದೇ ಜಮೀನಿನಲ್ಲಿ ಹಲವು ಬೆಳೆ; ರೈತರ ಕೈಹಿಡಿದ ಮಿಶ್ರ ಕೃಷಿ

ಏಕಬೆಳೆ ಪದ್ಧತಿಗಿಂತ ಮಿಶ್ರ ಬೆಳೆಗೆ ಒಲವು; ಒಂದೇ ಜಮೀನಿನಲ್ಲಿ ಹಲವು ಬೆಳೆ ಬೆಳೆದು ಹೆಚ್ಚುವರಿ ಆದಾಯ

"ಮುಂಜಾನೆಯ ಮೆರಗು"

ಜಗಳೂರು ಅ. 30– ಕೃಷಿಯಲ್ಲಿ ಒಂದೇ ಬೆಳೆಯನ್ನು ಅವಲಂಬಿಸುವುದಕ್ಕಿಂತ ಒಂದೇ ಜಮೀನಿನಲ್ಲಿ ಎರಡು ಅಥವಾ ಅದಕ್ಕಿಂತ ಹೆಚ್ಚು ಬೆಳೆಗಳನ್ನು ಬೆಳೆಯುವ ಮಿಶ್ರ ಕೃಷಿ ಪದ್ಧತಿ ರೈತರಿಗೆ ವರವಾಗಿ ಪರಿಣಮಿಸುತ್ತಿದೆ. ಬೆಳೆ ನಷ್ಟದ ಅಪಾಯವನ್ನು ತಗ್ಗಿಸುವುದರ ಜೊತೆಗೆ ಕಡಿಮೆ ವೆಚ್ಚದಲ್ಲಿ ಹೆಚ್ಚಿನ ಆದಾಯ ಗಳಿಸುವ ಉದ್ದೇಶದಿಂದ ತಾಲ್ಲೂಕಿನ ರೈತರು ಮಿಶ್ರ ಬೆಳೆ ಪದ್ಧತಿಯತ್ತ ಹೆಚ್ಚು ಒಲವು ತೋರುತ್ತಿದ್ದಾರೆ.

ತಾಲ್ಲೂಕಿನ ಕಸಬಾ, ಸೊಕ್ಕೆ, ಬಿಳಿಚೋಡು ಸೇರಿದಂತೆ ವಿವಿಧ ಗ್ರಾಮಗಳಲ್ಲಿನ ರೈತರು ತಮ್ಮ ಜಮೀನಿನ ಮಣ್ಣಿನ ಗುಣ, ನೀರಿನ ಲಭ್ಯತೆ ಹಾಗೂ ಹವಾಮಾನಕ್ಕೆ ಅನುಗುಣವಾಗಿ ಮಿಶ್ರ ಕೃಷಿಯನ್ನು ಅಳವಡಿಸಿಕೊಳ್ಳುತ್ತಿದ್ದಾರೆ. ವಿಶೇಷವಾಗಿ ನೀರಾವರಿ ಆಶ್ರಿತ ತೋಟಗಾರಿಕೆ ಬೆಳೆಗಳಲ್ಲಿ ಅಂತರಬೆಳೆ ಪದ್ಧತಿಗೆ ಆದ್ಯತೆ ನೀಡುತ್ತಿರುವುದು ಗಮನ ಸೆಳೆಯುತ್ತಿದೆ.

ಅಡಿಕೆ ತೋಟಗಳ ನಡುವೆ ತೊಗರಿ, ಚಂಡು ಹೂವು, ಬಾಳೆ ಸೇರಿದಂತೆ ವಿವಿಧ ಬೆಳೆಗಳನ್ನು ಬೆಳೆಯಲಾಗುತ್ತಿದೆ. ಅದೇ ರೀತಿ ಪಪ್ಪಾಯಿ ಬೆಳೆಯ ಮಧ್ಯದಲ್ಲಿ ಸಿಹಿ ಕುಂಬಳಕಾಯಿ, ಎಲೆಕೋಸು ಸೇರಿದಂತೆ ತರಕಾರಿ ಬೆಳೆಗಳನ್ನು ಬೆಳೆದು ಹೆಚ್ಚುವರಿ ಆದಾಯ ಪಡೆಯಲು ರೈತರು



ಮುಂದಾಗಿದ್ದಾರೆ.

ಏಕಬೆಳೆಗಿಂತ ಮಿಶ್ರ ಬೆಳೆ ಲಾಭದಾಯಕ

ಸಾಮಾನ್ಯವಾಗಿ ಒಂದೇ ಬೆಳೆಯನ್ನು ಬೆಳೆದಾಗ ಹವಾಮಾನ ವೈಪರೀತ್ಯ, ಮಳೆ ಕೊರತೆ, ಕೀಟಬಾಧೆ ಅಥವಾ ಮಾರುಕಟ್ಟೆ ದರ ಕುಸಿತದಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇರುತ್ತದೆ. ಆದರೆ ಮಿಶ್ರ ಕೃಷಿ ಪದ್ಧತಿಯಲ್ಲಿ ಒಂದೇ ಜಮೀನಿನಲ್ಲಿ ವಿವಿಧ ಬೆಳೆಗಳನ್ನು ಬೆಳೆಯುವುದರಿಂದ ಒಂದು ಬೆಳೆ ಕೈ–ಕೊಟ್ಟರೂ ಮತ್ತೊಂದು ಬೆಳೆ ರೈತರ ಕೈಹಿಡಿಯುವ ಸಾಧ್ಯತೆ ಹೆಚ್ಚಿರುತ್ತದೆ.

ಒಂದೇ ಜಮೀನಿನಲ್ಲಿ ಮುಖ್ಯ ಬೆಳೆಯೊಂದಿಗೆ ಅಲ್ಪಾವಧಿ ಬೆಳೆಗಳನ್ನು ಬೆಳೆಯುವುದರಿಂದ ವಿವಿಧ ಸಮಯಗಳಲ್ಲಿ ಫಸಲು ಪಡೆಯಬಹುದು. ಇದ–ರಿಂದ ರೈತರಿಗೆ ನಿರಂತರ ಆದಾಯದ ಮೂಲ ಸೃಷ್ಟಿಯಾಗುತ್ತದೆ. ಅಲ್ಲದೆ, ಮುಖ್ಯ ಬೆಳೆಗೆ ನೀಡುವ ನೀರು, ಗೊಬ್ಬರ ಮತ್ತು ಕೃಷಿ ನಿರ್ವಹಣೆಯ ಸೌಲಭ್ಯವನ್ನು ಸೂಕ್ತ ಯೋಜನೆಯೊಂದಿಗೆ ಬಳಸಿಕೊಂಡು ಮತ್ತೊಂದು ಬೆಳೆಯನ್ನೂ ಬೆಳೆಸಲು ಅವಕಾಶವಿದೆ. ಇದರಿಂದ ಕೃಷಿ ಸಂಪನ್ಮೂಲಗಳ ಸದ್ಬಳಕೆಯಾಗಿ ರೈತರ ಶ್ರಮ ಮತ್ತು ವೆಚ್ಚವನ್ನು ಕಡಿಮೆ ಮಾಡಿಕೊಳ್ಳಲು ಸಹಕಾರಿಯಾಗುತ್ತದೆ.

ಮಣ್ಣಿನ ಫಲವತ್ತತೆ ಹೆಚ್ಚಳಕ್ಕೆ ಸಹಕಾರಿ

ತೊಗರಿ, ಹೆಸರು, ಉದ್ದು, ಅವರೆ ಸೇರಿದಂತೆ ದ್ವಿದಳ ಧಾನ್ಯ ಬೆಳೆಗಳನ್ನು ಸೂಕ್ತವಾಗಿ ಸಂಯೋಜಿಸುವುದರಿಂದ ಮಣ್ಣಿನ ಆರೋಗ್ಯ ಕಾಪಾಡಲು ಸಹಾಯವಾಗುತ್ತದೆ. ಇಂತಹ ಬೆಳೆಗಳು ಬೇರುಗಳಲ್ಲಿರುವ ಗಂಟುಗಳ ಮೂಲಕ ವಾತಾವರಣದ ಸಾರಜನಕವನ್ನು ಮಣ್ಣಿನಲ್ಲಿ ಸ್ಥಿರೀಕರಿಸಲು ನೆರವಾಗುತ್ತವೆ. ಇದ–ರಿಂದ ಮಣ್ಣಿನ ಫಲವತ್ತತೆ ಸುಧಾರಣೆಗೆ ಅನುಕೂಲವಾಗುತ್ತದೆ.

ಇದಲ್ಲದೆ, ವಿವಿಧ ಬೆಳೆಗಳನ್ನು ಬೆಳೆಯುವುದರಿಂದ ಕಳೆಗಳ ಬೆಳವಣಿಗೆ ನಿಯಂತ್ರಣಕ್ಕೂ ಸಹಕಾರಿಯಾಗಬಹುದು. ಸೂಕ್ತ ಬೆಳೆ ಸಂಯೋಜನೆ ಹಾಗೂ ಅಂತರ ಕಾಯ್ದುಕೊಂಡರೆ ಕೆಲವು ಕೀಟ ಮತ್ತು ರೋಗಗಳ ಹರಡುವಿಕೆಯ ಅಪಾಯವನ್ನೂ ಕಡಿಮೆ ಮಾಡಬಹುದು.

ಜಗಳೂರು ಭಾಗದಲ್ಲಿ ಮಿಶ್ರ ಕೃಷಿಗೆ ಅವಕಾಶ

ಜಗಳೂರು ತಾಲ್ಲೂಕು ಮಳೆ ಆಶ್ರಿತ ಕೃಷಿ ಪ್ರದೇಶವಾಗಿದ್ದು, ಮುಸುಕಿನ ಜೋಳ, ರಾಗಿ, ತೊಗರಿ, ಶೇಂಗಾ, ಸೂರ್ಯಕಾಂತಿ, ಅವರೆ ಸೇರಿದಂತೆ ಹಲವು ಬೆಳೆಗಳನ್ನು ರೈತರು ಬೆಳೆಯುತ್ತಾರೆ. ಸ್ಥಳೀಯ ಮಣ್ಣಿನ ಗುಣ, ಮಳೆಯ ಪ್ರಮಾಣ ಮತ್ತು ನೀರಿನ ಲಭ್ಯತೆಗೆ ಅನುಗುಣವಾಗಿ ಮುಸುಕಿನ ಜೋಳದೊಂದಿಗೆ ತೊಗರಿ, ರಾಗಿಯೊಂದಿಗೆ ತೊಗರಿ, ಶೇಂಗಾದೊಂದಿಗೆ ತೊಗರಿ ಹಾಗೂ ಸಜ್ಜೆಯೊಂದಿಗೆ ಹೆಸರುಕಾಳು ಬೆಳೆಯುವಂತಹ ಬೆಳೆ ಸಂಯೋಜನೆಗಳನ್ನು ಅನುಸರಿಸಬಹುದು.



ನೀರಾವರಿ ಸೌಲಭ್ಯವಿರುವ ಜಮೀನುಗಳಲ್ಲಿ ಅಡಿಕೆ, ಪಪ್ಪಾಯಿ ಸೇರಿದಂತೆ ತೋಟಗಾರಿಕೆ ಬೆಳೆಗಳ ನಡುವೆ ಸೂಕ್ತ ಅಂತರದಲ್ಲಿ ತರಕಾರಿ ಹಾಗೂ ಅಲ್ಪಾವಧಿ ಬೆಳೆಗಳನ್ನು ಬೆಳೆಸುವ ಮೂಲಕ ಹೆಚ್ಚುವರಿ ಆದಾಯ ಗಳಿಸಲು ಅವಕಾಶವಿದೆ.

ಯೋಜಿತ ಕೃಷಿ ಅಗತ್ಯ

ಮಿಶ್ರ ಕೃಷಿ ಪದ್ಧತಿ ಅನುಸರಿಸುವಾಗ ಮುಖ್ಯ ಬೆಳೆಯ ಸ್ವರೂಪ, ಬೆಳೆಗಳ ಬೆಳವಣಿಗೆಯ ಅವಧಿ, ಬೇರುಗಳ ವ್ಯಾಪ್ತಿ, ನೀರು ಮತ್ತು ಪೋಷಕಾಂಶಗಳ ಅವಶ್ಯಕತೆಗಳನ್ನು ಗಮನದಲ್ಲಿಟ್ಟುಕೊಳ್ಳುವುದು ಅಗತ್ಯ. ಯಾವುದೇ ಬೆಳೆಗಳನ್ನು ಬೇಕಾಬಿಟ್ಟಿಯಾಗಿ ಒಟ್ಟಿಗೆ ಬೆಳೆಯುವುದರಿಂದ ನಿರೀಕ್ಷಿತ ಲಾಭ ದೊರೆಯುವುದಿಲ್ಲ. ಕೃಷಿ ತಜ್ಞರ ಸಲಹೆಯಂತೆ ಸೂಕ್ತ ಬೆಳೆಗಳ ಆಯ್ಕೆ ಮತ್ತು ಅಂತರ ಕಾಯ್ದುಕೊಂಡು ಕೃಷಿ ಮಾಡಿದರೆ ಉತ್ತಮ ಇಳುವರಿ ಪಡೆಯಬಹುದು.

ಒಟ್ಟಾರೆ ಹವಾಮಾನ ವೈಪರೀತ್ಯ, ಕೃಷಿ ವೆಚ್ಚದ ಹೆಚ್ಚಳ ಹಾಗೂ ಮಾರುಕಟ್ಟೆಯ ಏರಿಳಿತಗಳಿಂದ ಸಂಕಷ್ಟ ಎದುರಿಸುತ್ತಿರುವ ರೈತರಿಗೆ ಮಿಶ್ರ ಕೃಷಿ ಪದ್ಧತಿ ಹೊಸ ಭರವಸೆ ಮೂಡಿಸಿದೆ. ಒಂದೇ ಜಮೀನಿನಲ್ಲಿ ಹಲವು ಬೆಳೆಗಳನ್ನು ಬೆಳೆಸುವ ಮೂಲಕ ಭೂಮಿ, ನೀರು ಮತ್ತು ಶ್ರಮವನ್ನು ಸಮರ್ಪಕವಾಗಿ ಬಳಸಿಕೊಂಡು ಕೃಷಿಯನ್ನು ಆರ್ಥಿಕವಾಗಿ ಸುಸ್ಥಿರಗೊಳಿಸಲು ಸಾಧ್ಯವಿದೆ.

ಸಾರ್ವಜನಿಕರ ಅಹವಾಲು ಆಲಿಸಿದ ಎಂ.ಡಿ. ಕೀರ್ತಿಕುಮಾರ್

"ಮುಂಜಾನೆಯ ಮೆರಗು"

ಜಗಳೂರು ಅ. 30– ಕೆಪಿಸಿಸಿ ಎಸ್‌ಟಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಅವರು ಜಗಳೂರು ವಿಧಾನಸಭಾ ಕ್ಷೇತ್ರದ ವಿವಿಧ ಭಾಗಗಳಿಂದ ತಮ್ಮ ಕಚೇರಿಗೆ ಆಗಮಿಸಿದ ಸಾರ್ವಜನಿಕರನ್ನು ಭೇಟಿಯಾಗಿ ಅವರ ಕುಶಲೋಪರಿ ವಿಚಾರಿಸಿದರು.



ಈ ಸಂದರ್ಭದಲ್ಲಿ ಸಾರ್ವಜನಿಕರು ತಮ್ಮ ವೈಯಕ್ತಿಕ ಹಾಗೂ ಗ್ರಾಮಗಳಲ್ಲಿನ ವಿವಿಧ ಸಮಸ್ಯೆಗಳ ಕುರಿತು ಸಲ್ಲಿಸಿದ ಮನವಿಗಳನ್ನು ಸ್ವೀಕರಿಸಿ, ಅವುಗಳ ಬಗ್ಗೆ ಸಮಗ್ರವಾಗಿ ಮಾಹಿತಿ ಪಡೆದು–ಕೊಂಡರು. ಜನರು ಎದುರಿಸುತ್ತಿರುವ ಸಮಸ್ಯೆಗಳಿಗೆ ಸ್ಪಂದಿಸುವುದು ಹಾಗೂ ಅವರ ಅಹವಾಲುಗಳಿಗೆ ಸೂಕ್ತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ, ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರುವ ಮೂಲಕ ಶೀಘ್ರವಾಗಿ ಸ್ಪಂದಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ರಾಗಿಯಲ್ಲಿ ಅರಳಿದ ಕರ್ನಾಟಕದ ನಕ್ಷೆ

ಎನ್‌ಎಂಕೆ ಶಾಲೆಯ ವಿನೂತನ ಪ್ರಯತ್ನ; ವಿದ್ಯಾರ್ಥಿಗಳಲ್ಲಿ ಕನ್ನಡಾಭಿಮಾನ ಮೂಡಿಸುವ ಕಾರ್ಯ

"ಮುಂಜಾನೆಯ ಮೆರಗು"

ಜಗಳೂರು ಅ, 30– ಕನ್ನಡ ರಾಜ್ಯೋತ್ಸವದ ಅಂಗವಾಗಿ ಪಟ್ಟಣದ ಎನ್‌ಎಂಕೆ ಆಂಗ್ಲ ಮಾಧ್ಯಮ ಶಾಲೆಯ ಆವರಣದಲ್ಲಿ ರಾಗಿಯ ಬೆಳೆ ಮೂಲಕ ಕರ್ನಾಟಕದ ನಕ್ಷೆಯನ್ನು ರೂಪಿಸಿರುವುದು ಎಲ್ಲರ ಗಮನ ಸೆಳೆಯುತ್ತಿದೆ.

ನವೆಂಬರ್ 1ರಂದು ಆಚರಿಸಲಾಗುವ ಕನ್ನಡ ರಾಜ್ಯೋತ್ಸವದ ಹಿನ್ನೆಲೆಯಲ್ಲಿ ಶಾಲೆಯ ಆವರಣದಲ್ಲಿ ಸುಮಾರು 10 ದಿನಗಳ ಹಿಂದೆಯೇ ವಿನೂತನ ಪ್ರಯತ್ನ–ಕ್ಕೆ ಚಾಲನೆ ನೀಡಲಾಗಿತ್ತು. ಕರ್ನಾಟಕದ ಭೂಪಟದ ಆಕಾರದಲ್ಲಿ ರಾಗಿಯನ್ನು ಬಿತ್ತನೆ ಮಾಡಿ ಬೆಳೆಸಲಾಗಿದ್ದು, ಇದೀಗ



ಹಚ್ಚ ಹಸಿರಿನಿಂದ ಕಂಗೊಳಿಸುತ್ತಿರುವ ರಾಗಿ ಸಸಿಗಳು ಕರ್ನಾಟಕದ ನಕ್ಷೆಯ ಪಾತ್ರವಾಗಿದೆ.

ರೂಪದಲ್ಲಿ ಸುಂದರವಾಗಿ ಕಂಗೊಳಿಸುತ್ತಿವೆ.

ನಕ್ಷೆಯ ಕೆಳಭಾಗದಲ್ಲಿ ಶಾಲೆಯ ಹೆಸರನ್ನು ಸೂಚಿಸುವಂತೆ 'ಎನ್‌ಎಂಕೆ' ಎಂದು ನಮೂದಿಸಿರುವುದು ವಿಶೇಷವಾಗಿದೆ. ಪ್ರಕೃತಿಯ ಮಡಿಲಲ್ಲಿ ರಾ–ಗಿಯ ಮೂಲಕ ಕನ್ನಡ ನಾಡಿನ ಭೂಪಟವನ್ನು ಅರಳಿಸಿರುವ ಶಾಲೆಯ ಈ ಸೃಜನಾತ್ಮಕ ಪ್ರಯತ್ನ ನೋಡುಗರ ಮೆಚ್ಚುಗೆಗೆ ಕೇವಲ ಪಠ್ಯಪುಸ್ತಕಗಳಿಗೆ ಕನ್ನಡ ರಾಜ್ಯೋತ್ಸವದ ಆಚರಣೆಯನ್ನು ಸೀಮಿತಗೊಳಿಸದೆ, ಇಂತಹ ವಿನೂತನ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳಲ್ಲಿ ನಾಡು, ನುಡಿ, ನೆಲ, ಜಲ ಹಾಗೂ ಸಂಸ್ಕೃತಿಯ ಬಗ್ಗೆ ಅಭಿಮಾನ ಮೂಡಿಸುವ ಉದ್ದೇಶದಿಂದ ಈ ಕಾರ್ಯ ಕೈಗೊಳ್ಳಲಾಗಿದೆ.

ಆಂಗ್ಲ ಮಾಧ್ಯಮ ಶಾಲೆಯಾದರೂ ಕನ್ನಡ ಭಾಷೆ ಮತ್ತು ನಾಡಿನ ಸಂಸ್ಕೃತಿಗೆ ವಿಶೇಷ ಗೌರವ ನೀಡುವ ಮೂಲಕ ವಿದ್ಯಾರ್ಥಿಗಳಲ್ಲಿ ಕನ್ನಡದ ಕಂಪು ಹರಡುವ ಪ್ರಯತ್ನ ಮಾಡಿರುವುದು ಶ್ಲಾಘನೀಯವಾಗಿದೆ.

ಕನ್ನಡ ರಾಜ್ಯೋತ್ಸವ, ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಲು ತಹಶೀಲ್ದಾರ್ ಸೂಚನೆ

"ಮುಂಜಾನೆಯ ಮೆರಗು"

ಜಗಳೂರು ಅ, 30– ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ನವೆಂಬರ್ 1ರ ಭಾನುವಾರ ಪಟ್ಟಣದ ಬಯಲು ರಂಗಮಂದಿರದಲ್ಲಿ ಬೆಳಿಗ್ಗೆ 9 ಗಂಟೆಗೆ ತಾಲೂಕು ಮಟ್ಟದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಆಚರಿಸಲಾಗುವುದು ಎಂದು ತಹಶೀಲ್ದಾರ್ ಗುರುಬಸವರಾಜ್ ತಿಳಿಸಿದರು.



ಶುಕ್ರವಾರ ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಮಾಧ್ಯಮದವರಿಗೆ ಮಾಹಿತಿ ನೀಡಿದ ಅವರು, ಕನ್ನಡ ನಾಡು, ನುಡಿ, ಭಾಷೆ, ಸಂಸ್ಕೃತಿ ಹಾಗೂ ಪರಂಪರೆಯ ಮಹತ್ವವನ್ನು ಸಾರುವ ಕನ್ನಡ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ತಾಲೂಕು ಆಡಳಿತದಿಂದ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಈಗಾಗಲೇ ಪಟ್ಟಣದ ಸರ್ಕಾರಿ ಕಚೇರಿ ಕಟ್ಟಡಗಳಿಗೆ ವಿದ್ಯುತ್ ದೀಪಾಲಂಕಾರ ಮಾಡಲಾಗಿದ್ದು, ಕನ್ನಡ ಹಬ್ಬದ ಸಂಭ್ರಮ ಮನೆಮಾಡಿದೆ ಎಂದು ಹೇಳಿದರು.

ನವೆಂಬರ್ 1ರಂದು ಬೆಳಿಗ್ಗೆ ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಕಡ್ಡಾಯವಾಗಿ ತಮ್ಮ ತಮ್ಮ ಕಚೇರಿಗಳಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಿಸಿದ ನಂತರ, ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಪಟ್ಟಣದ ಬಯಲು ರಂಗಮಂದಿರದಲ್ಲಿ ಆಯೋಜಿಸಿರುವ ತಾಲೂಕು ಮಟ್ಟದ ಕಾರ್ಯಕ್ರಮದಲ್ಲಿ ತಪ್ಪದೇ ಭಾಗವಹಿಸಬೇಕು ಎಂದು ಸೂಚಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಬಿ. ದೇವೇಂದ್ರಪ್ಪ ವಹಿಸಲಿದ್ದು, ತಹಶೀಲ್ದಾರ್ ಗುರುಬಸವರಾಜ್ ಧ್ವಜಾರೋಹಣ ನೆರವೇರಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಕನ್ನಡ ನಾಡಿನ ಇತಿಹಾಸ, ಭಾಷೆಯ ಹಿರಿಮೆ, ಸಂಸ್ಕೃತಿ ಹಾಗೂ ಕನ್ನಡದ ಏಕೀಕರಣಕ್ಕಾಗಿ ಶ್ರಮಿಸಿದ ಮಹನೀಯರ ಕೊಡುಗೆಯನ್ನು ಸ್ಮರಿಸಲಾಗುವುದು.

ಮುಖ್ಯ ಅತಿಥಿಗಳಾಗಿ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ತಿಮ್ಮರಾಯಪ್ಪ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಶಂಕರ ಅಹಮದ್, ಕಸಾಪ ತಾಲೂಕು ಅಧ್ಯಕ್ಷೆ ಸುಜಾತಮ್ಮ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಲ್. ತಿಪ್ಪೇಸ್ವಾಮಿ, ವಕೀಲರ ಸಂಘದ ತಾಲೂಕು ಅಧ್ಯಕ್ಷ ಬಿ.ವಿ. ನಾಗಪ್ಪ ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಅಧಿಕಾರಿಗಳು, ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ವಾಲ್ಮೀಕಿ ವಿಚಾರಗಳನ್ನು ಮೈಗೂಡಿಸಿಕೊಂಡು ಶಿಕ್ಷಣದ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ನೀಡಲಿ: ಕೆ.ಪಿ. ಪಾಲಯ್ಯ

"ಮುಂಜಾನೆಯ ಮೆರಗು"

ಜಗಳೂರು ಅ, 30– ಮಹರ್ಷಿ ವಾಲ್ಮೀಕಿಯವರ ಆದರ್ಶ, ಚಿಂತನೆ ಹಾಗೂ ಮೌಲ್ಯಗಳನ್ನು ಯುವಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಉತ್ತಮ ಶಿಕ್ಷಣ ಪಡೆದು ಸಮಾಜಕ್ಕೆ ಮಾದರಿಯಾಗುವ ಮೂಲಕ ಗ್ರಾಮದ ಕೀರ್ತಿಯನ್ನು ಹೆಚ್ಚಿಸುವುದು ಯುವಕರ ಮುಖ್ಯ ಗುರಿಯಾಗಬೇಕು ಎಂದು ಕೆಪಿಸಿಸಿ ಎಸ್ಟಿ ವಿಭಾಗದ ಮಾಜಿ ರಾಜ್ಯಾಧ್ಯಕ್ಷ ಕೆ.ಪಿ. ಪಾಲಯ್ಯ ತಿಳಿಸಿದರು.

ಜಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹೊನ್ನಮಾರಡಿ ಗ್ರಾಮದಲ್ಲಿ ಆಯೋಜಿಸಲಾಗಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮಹರ್ಷಿ ವಾಲ್ಮೀಕಿಯವರು ತಮ್ಮ ಜ್ಞಾನ, ತಪಸ್ಸು ಹಾಗೂ ಆದರ್ಶ ಚಿಂತನೆಗಳ ಮೂಲಕ ಇಡೀ ಸಮಾಜಕ್ಕೆ ಅಮೂಲ್ಯ ಸಂದೇಶ ನೀಡಿದ್ದಾರೆ. ಅವರು ರಚಿಸಿದ ರಾಮಾಯಣವು ಮಾನವೀಯ ಮೌಲ್ಯಗಳು, ಧರ್ಮ, ಸತ್ಯ, ನ್ಯಾಯ ಹಾಗೂ ಆದರ್ಶ ಬದುಕಿನ ಮಹತ್ವವನ್ನು ಸಾರುತ್ತದೆ. ಇಂತಹ ಮಹಾನ್ ವ್ಯಕ್ತಿಗಳ ಜೀವನ ಚರಿತ್ರೆ ಮತ್ತು ವಿಚಾರಗಳನ್ನು ಯುವಕರು ಅರಿತುಕೊಂಡು ಮುನ್ನಡೆಯಬೇಕು. ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿ ಸಮಾಜದಲ್ಲಿ ಉತ್ತಮ ಸ್ಥಾನಮಾನ ಗಳಿಸುವುದರ ಜೊತೆಗೆ ಇತರರಿಗೂ ಪ್ರೇರಣೆಯಾಗಬೇಕು ಎಂದು ಹೇಳಿದರು.

ನಂತರ ರಾಜನಹಟ್ಟಿ ಗ್ರಾಮದಲ್ಲಿ ನಡೆದ ಗ್ರಾಮದ ದೇವರುಗಳ ದಸರಾ



ಹಬ್ಬದ ಅಂಗವಾಗಿ ಆಯೋಜಿಸಲಾಗಿದ್ದ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಕೆ.ಪಿ. ಪಾಲಯ್ಯ ಪಾಲ್ಗೊಂಡು ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಎರಡೂ ಗ್ರಾಮಗಳ ಮುಖಂಡರು, ಗ್ರಾಮಸ್ಥರು, ಯುವಕರು, ಭಕ್ತಾದಿಗಳು ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಏಕಬಳಕೆಯ ಪ್ಲಾಸ್ಟಿಕ್ ಬಳಕೆ ನಿಷೇಧ: ಬಟ್ಟೆ ಚೀಲ ಬಳಸಲು ಸಾರ್ವಜನಿಕರಿಗೆ ಮನವಿ

"ಮುಂಜಾನೆಯ ಮೆರಗು"

ಜಗಳೂರು ಅ. 30– ಪರಿಸರ ಸಂರಕ್ಷಣೆ ಹಾಗೂ ಸ್ವಚ್ಛತೆಗೆ ಆದ್ಯತೆ ನೀಡುವ ನಿಟ್ಟಿನಲ್ಲಿ ಏಕಬಳಕೆಯ ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸಲಾಗಿದ್ದು, ಸಾರ್ವಜನಿಕರು ದಿನನಿತ್ಯದ ವಸ್ತುಗಳನ್ನು ಖರೀದಿಸಲು ಮಾರುಕಟ್ಟೆಗೆ ತೆರಳುವಾಗ ಕಡ್ಡಾಯವಾಗಿ ಬಟ್ಟೆ ಚೀಲಗಳನ್ನು ಕೊಂಡೊಯ್ಯುವ ಮೂಲಕ ಪ್ಲಾಸ್ಟಿಕ್ ಬಳಕೆಯನ್ನು ತ್ಯಜಿಸಬೇಕು ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಾರ್ವಜನಿಕರಿಗೆ ಮನವಿ ಮಾಡಿದರು.

ಪಟ್ಟಣದ ಹೊಸ ಖಾಸಗಿ ಬಸ್ ನಿಲ್ದಾಣದ ಸಮೀಪ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಹಾಗೂ ಸಿಬ್ಬಂದಿ



ಕಾರ್ಯಾಚರಣೆ ನಡೆಸಿ ಅಂಗಡಿಗಳಲ್ಲಿ ಮಾರಾಟಕ್ಕೆ ಇಡಲಾಗಿದ್ದ ಏಕಬಳಕೆಯ ಪ್ಲಾಸ್ಟಿಕ್ ಕವರ್‌ಗಳನ್ನು ಪರಿಶೀಲಿಸಿ ವಶಪಡಿಸಿಕೊಂಡರು.


ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಾಧಿಕಾರಿಗಳು, ಪ್ಲಾಸ್ಟಿಕ್ ಬಳಕೆಯಿಂದ ಪರಿಸರದ ಮೇಲೆ ಗಂಭೀರ ಪರಿಣಾಮ ಉಂಟಾಗುತ್ತಿದ್ದು, ಚರ

ಚನ್ನಗಿರಿ ಕ್ಷೇತ್ರದ ಅಭಿವೃದ್ಧಿ ಕಾಮಗಾರಿಗಳ ಕುರಿತು ಸಚಿವ ಈಶ್ವರ ಖಂಡ್ರೆ ಜತೆ ಶಾಸಕ ಶಿವಗಂಗಾ ಬಸವರಾಜು ಚರ್ಚೆ

"ಮುಂಜಾನೆಯ ಮೆರಗು"

ಬೆಂಗಳೂರು ಅ. 30- ಚನ್ನಗಿರಿ ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುವ ನಿಟ್ಟಿನಲ್ಲಿ ಶಾಸಕ ಶಿವಗಂಗಾ ಬಸವರಾಜು ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಅವರನ್ನು ಬೆಂಗಳೂರಿನ ವಿಧಾನಸೌಧದ ಮೊಗಸಾಲೆಯಲ್ಲಿ ಭೇಟಿ ಮಾಡಿ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಚನ್ನಗಿರಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕೈಗೊಳ್ಳಬೇಕಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳು, ಗ್ರಾಮೀಣ ಪ್ರದೇಶಗಳ ಮೂಲಸೌಕರ್ಯ ಅಭಿವೃದ್ಧಿ ಹಾಗೂ



ಸಾರ್ವಜನಿಕರಿಗೆ ಅಗತ್ಯವಿರುವ ಸೌಲಭ್ಯಗಳ ಕುರಿತು ಸಚಿವರ ಗಮನ ಸೆಳೆದರು.

ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ರಸ್ತೆ, ಕುಡಿಯುವ ನೀರು, ಚರಂಡಿ ಸೇರಿದಂತೆ ಗ್ರಾಮೀಣಾಭಿವೃದ್ಧಿಗೆ ಸಂಬಂಧಿಸಿದ ಕಾಮಗಾರಿಗಳಿಗೆ ಅಗತ್ಯ ಅನುದಾನ ಒದಗಿಸಿ, ಅಭಿವೃದ್ಧಿ ಕಾರ್ಯಗಳಿಗೆ ವೇಗ ನೀಡುವಂತೆ ಮನವಿ ಸಲ್ಲಿಸಿದರು. ಕ್ಷೇತ್ರದ ಸಮಗ್ರ ಪ್ರಗತಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆಯೂ ಸಚಿವರಲ್ಲಿ ಮನವಿ ಮಾಡಿದರು.

ಚನ್ನಗಿರಿ ಕ್ಷೇತ್ರದ ಅಭಿವೃದ್ಧಿ ಹಾಗೂ ಜನರ ಆಶೋತ್ತರಗಳನ್ನು ಈಡೇರಿಸುವುದು ತಮ್ಮ ಆದ್ಯತೆ-ಯಾಗಿದ್ದು, ಸಾರ್ವಜನಿಕರ ಸಮಸ್ಯೆ ಮತ್ತು ಅಹವಾಲುಗಳಿಗೆ ನಿರಂತರವಾಗಿ ಸ್ಪಂದಿಸಲಾಗುತ್ತಿದೆ. ಕ್ಷೇತ್ರದ ಅಭಿವೃದ್ಧಿಗಾಗಿ ಸಂಬಂಧಪಟ್ಟ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಶಾಸಕ ಶಿವಗಂಗಾ ಬಸವರಾಜು ತಿಳಿಸಿದರು.

ಅತ್ತಿಗೆರೆ-ಮಲೇನಹಳ್ಳಿ ಸಿ.ಸಿ. ರಸ್ತೆ ಕಾಮಗಾರಿ ಪರಿಶೀಲಿಸಿದ ಸಚಿವ ಕೆ.ಎಸ್. ಬಸವಂತಪ್ಪ

"ಮುಂಜಾನೆಯ ಮೆರಗು"

ದಾವಣಗೆರೆ ಅ. 30- ಜಿಲ್ಲೆಯ ಅತ್ತಿಗೆರೆ ಗ್ರಾಮದಿಂದ ಮಲೇನಹಳ್ಳಿ ಗ್ರಾಮದವರೆಗೆ ಲೋಕೋಪಯೋಗಿ ಇಲಾಖೆಯ ವತಿಯಿಂದ ಕೈಗೊಳ್ಳಲಾಗುತ್ತಿರುವ ಸಿಮೆಂಟ್ ಕಾಂಕ್ರೀಟ್ (ಸಿ.ಸಿ.) ರಸ್ತೆ ನಿರ್ಮಾಣ ಕಾಮಗಾರಿಗೆ ಸಚಿವ ಕೆ.ಎಸ್. ಬಸವಂತಪ್ಪ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಈ ಸಂದರ್ಭದಲ್ಲಿ ರಸ್ತೆ ಕಾಮಗಾರಿಯ ಪ್ರಗತಿ ಹಾಗೂ ನಿರ್ಮಾಣದ ಗುಣಮಟ್ಟವನ್ನು ಖುದ್ದಾಗಿ ವೀಕ್ಷಿಸಿದ ಸಚಿವರು, ಸಂಬಂಧಪಟ್ಟ ಅಧಿಕಾರಿಗಳಿಂದ ಕಾಮಗಾರಿಯ ವಿವರಗಳನ್ನು ಪಡೆದು-ಕೊಂಡರು.

ರಸ್ತೆ ನಿರ್ಮಾಣ ಕಾಮಗಾರಿಯಲ್ಲಿ ಯಾವುದೇ ಲೋಪದೋಷಗಳು ಕಂಡುಬರದಂತೆ ಎಚ್ಚರಿಕೆ ವಹಿಸಬೇಕು. ನಿಗದಿತ ಮಾನದಂಡಗಳ ಪ್ರಕಾರ ಉತ್ತಮ ಗುಣಮಟ್ಟದ ಸಾಮಗ್ರಿಗಳನ್ನು ಬಳಸಿ ಕಾಮಗಾರಿ ಪೂರ್ಣಗೊಳಿಸಬೇಕು. ಸಾರ್ವಜನಿಕರ ಸಂಚಾರ-ಕ್ಕೆ ಅನುಕೂಲವಾಗುವಂತೆ ಸುಸಜ್ಜಿತ ರಸ್ತೆ ನಿರ್ಮಾಣಕ್ಕೆ ಆದ್ಯತೆ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಭಿವೃದ್ಧಿ ಕಾಮಗಾರಿಗಳಲ್ಲಿ ಗುಣಮಟ್ಟಕ್ಕೆ ಯಾವುದೇ ರಾಜಿ ಮಾಡಿಕೊಳ್ಳದೆ, ನಿಗದಿತ ಮಾನದಂಡಗಳಂತೆ ಕಾಮಗಾರಿ ಕೈಗೊಳ್ಳಬೇಕು. ಕಾಮಗಾರಿಯ ಪ್ರತಿಯೊಂದು ಹಂತದಲ್ಲೂ ಅಧಿಕಾರಿಗಳು ಮೇಲ್ವಿಚಾರಣೆ ನಡೆಸಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಸಚಿವರು ನಿರ್ದೇಶನ ನೀಡಿದರು.

ಹರಿಹರ ಬಿಜೆಪಿ ಮಹಿಳಾ ಮೋರ್ಚಾ ಪದಾಧಿಕಾರಿಗಳ ಪದಗ್ರಹಣ

"ಮುಂಜಾನೆಯ ಮೆರಗು"

ಹರಿಹರ ಅ. 30- ಭಾರತೀಯ ಜನತಾ ಪಕ್ಷದ ಮಹಿಳಾ ಮೋರ್ಚಾ ಸಂಘಟನೆಯನ್ನು ಬಲಪಡಿಸುವ ನಿಟ್ಟಿನಲ್ಲಿ ನಗರದ ಬಿಜೆಪಿ ಕಚೇರಿಯಲ್ಲಿ ಮಹಿಳಾ ಮೋರ್ಚಾದ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಶಾಸಕ ಬಿ.ಪಿ. ಹರೀಶ್ ಭಾಗವಹಿಸಿ ನೂತನ ಪದಾಧಿಕಾರಿಗಳಿಗೆ ಪಕ್ಷದ ಜವಾಬ್ದಾರಿ ಹಸ್ತಾಂತರಿಸಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಇತ್ತೀಚೆಗೆ ನಡೆದ ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳ ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಮತ್ತು ಎನ್‌ಡಿಎ ಅಭ್ಯರ್ಥಿಗಳು ನಾಲ್ಕೂ ಕ್ಷೇತ್ರಗಳಲ್ಲಿ ಜಯಗಳಿಸಿರುವುದು ಪಕ್ಷದ ಕಾರ್ಯಕರ್ತರಲ್ಲಿ ಹೊಸ ಹುಮ್ಮಸ್ಸು ಮೂಡಿಸಿದೆ. ಈ ಗೆಲುವು ಮುಂಬರುವ ಚುನಾವಣೆಗಳಿಗೆ ದಿಕ್ಸೂಚಿಯಾಗಿದ್ದು, ಕಾರ್ಯಕರ್ತರ ಪರಿಶ್ರಮ, ಸಂಘಟಿತ ಪ್ರಯತ್ನ ಹಾಗೂ ಪಕ್ಷದ ಸಂಘಟನಾ ಶಕ್ತಿಯಿಂದ ಈ ಸಾಧನೆ ಸಾಧ್ಯವಾಗಿದೆ ಎಂದು ತಿಳಿಸಿದರು.

ಮಹಿಳೆಯರು ಪಕ್ಷದ ಸಂಘಟನೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಜನಪರ ಕಾರ್ಯಕ್ರಮಗಳನ್ನು ಜನರಿಗೆ ತಲುಪಿಸುವ ಕಾರ್ಯ ಮಾಡಬೇಕು. ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸುವ ಜವಾಬ್ದಾರಿಯನ್ನು ನೂತನ ಪದಾಧಿಕಾರಿಗಳು ಸಮರ್ಥವಾಗಿ ನಿಭಾಯಿಸಬೇಕು ಎಂದು ಕರೆ ನೀಡಿದರು.

ಮಹಿಳಾ ಮೋರ್ಚಾದ ನೂತನ ನಗರ ಅಧ್ಯಕ್ಷೆ ರೂಪಾ ಶಶಿಕಾಂತ್ ಹಾಗೂ ಗ್ರಾಮಾಂತರ ಅಧ್ಯಕ್ಷೆ ಸುನೀತಾ ಧನರಾಜ್ ಅವರಿಗೆ ಶಾಸಕ ಬಿ.ಪಿ. ಹರೀಶ್ ಪಕ್ಷದ ಬಾವುಟ ಹಸ್ತಾಂತರಿಸುವ ಮೂಲಕ ಜವಾಬ್ದಾರಿ ವಹಿಸಿದರು. ಬಳಿಕ ರಾಜ್ಯ ಉಪಾಧ್ಯಕ್ಷೆ ಜಯಕ್ಕ, ಜಿಲ್ಲಾಧ್ಯಕ್ಷ ಚೇತನ ಶಿವಕುಮಾರ್ ಹಾಗೂ ಜಿಲ್ಲಾ ಪದಾಧಿಕಾರಿಗಳು ಮಹಿಳಾ ಮೋರ್ಚಾದ



ಇತರ ಪದಾಧಿಕಾರಿಗಳಿಗೆ ಪಕ್ಷದ ಶಾಲು ಹೊದಿಸಿ ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರೇಣುಕಾ ಕೃಷ್ಣ, ಮಹಿಳಾ ಮೋರ್ಚಾ ಉಸ್ತುವಾರಿ ಸೌಮ್ಯ, ಹಿರಿಯ ಮುಖಂಡರಾದ ಸುಮನ್ ಕಮಿತ್ಕರ್, ರೂಪಾ ಕಾಟ್ವೆ, ನಗರ ಘಟಕದ ಅಧ್ಯಕ್ಷ ರಾಜು ರೋಕಡೆ, ಪ್ರಧಾನ ಕಾರ್ಯದರ್ಶಿ ಸಂತೋಷ್ ಗುಡಿಮನಿ ಸೇರಿದಂತೆ ವಿವಿಧ ಮೋರ್ಚಾಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಅಪಘಾತದಲ್ಲಿ ಗಾಯಗೊಂಡು ಕೋಮಾ ಸ್ಥಿತಿಯಲ್ಲಿದ್ದ ಲಿಂಗರಾಜ್ ನಿಧನ: ಸಚಿವ ಕೆ.ಎಸ್. ಬಸವಂತಪ್ಪ ಸಂತಾಪ

"ಮುಂಜಾನೆಯ ಮೆರಗು"

ದಾವಣಗೆರೆ ಅ. 30- ಮಾಯಕೊಂಡ ವಿಧಾನಸಭಾ ಕ್ಷೇತ್ರದ ಹಾಲವರ್ತಿ ಗ್ರಾಮದ 51 ವರ್ಷದ ಲಿಂಗರಾಜ್ ಅವರು ಅಪಘಾತದಲ್ಲಿ ಗಾಯಗೊಂಡು ಕಳೆದ ಹಲವು ತಿಂಗಳುಗಳಿಂದ ಕೋಮಾ ಸ್ಥಿತಿಯಲ್ಲಿದ್ದು, ಚಿಕಿತ್ಸೆ ಫಲಕಾರಿಯಾಗದೆ ಇಂದು ನಿಧನರಾಗಿದ್ದಾರೆ.



ಲಿಂಗರಾಜ್ ಅವರ ನಿಧನದ ಸುದ್ದಿ ತಿಳಿದ ಸಚಿವ ಕೆ.ಎಸ್. ಬಸವಂತಪ್ಪ ಅವರು ದಾವಣಗೆರೆಯ ಚಿಗಟೇರಿ ಸರ್ಕಾರಿ ಜಿಲ್ಲಾ ಆಸ್ಪತ್ರೆಯ ಶವಾಗಾರಕ್ಕೆ ಭೇಟಿ ನೀಡಿ ಮೃತರ ಅಂತಿಮ ದರ್ಶನ ಪಡೆದರು.

ನಂತರ ಮೃತರ ಕುಟುಂಬದ ಸದಸ್ಯರನ್ನು ಭೇಟಿಯಾಗಿ ಸಾಂತ್ವನ ಹೇಳಿದ ಸಚಿವರು, ಕುಟುಂಬದ ದುಃಖದಲ್ಲಿ ಭಾಗಿಯಾದರು. ಹಲವು ತಿಂಗಳುಗಳಿಂದ ಜೀವನ್ಮರಣದ ಹೋರಾಟ ನಡೆಸುತ್ತಿದ್ದ ಲಿಂಗರಾಜ್ ಅವರ ನಿಧನ ನೋವು ತಂದಿದೆ ಎಂದು ಸಂತಾಪ ಸೂಚಿಸಿದರು.

ಮೃತರ ಆತ್ಮಕ್ಕೆ ಶಾಂತಿ ದೊರೆ-ಯಲಿ ಹಾಗೂ ದುಃಖಿತಪ್ತ ಕುಟುಂಬದ ಸದಸ್ಯರಿಗೆ ಈ ನೋವನ್ನು ಸಹಿಸುವ ಶಕ್ತಿಯನ್ನು ಭಗವಂತ ಕರುಣಿಸಲಿ ಎಂದು ಪ್ರಾರ್ಥಿಸಿದರು.

ರೈತರ ಬೆಳೆಹಾನಿ ಪರಿಹಾರ ವಿತರಣೆಯಲ್ಲಿ ವಿಳಂಬ ಕಾಂಗ್ರೆಸ್ ಸರ್ಕಾರದ ವಿರುದ್ಧ ಆರ್. ಅಶೋಕ್ ವಾಗ್ದಾಳಿ

"ಮುಂಜಾನೆಯ ಮೆರಗು"

ಬೆಂಗಳೂರು ಅ. 30- ಬೆಳೆಹಾನಿ ಪರಿಹಾರ ವಿತರಣೆಯಲ್ಲಿ ವಿಳಂಬ ಮಾಡುತ್ತಿರುವ ರಾಜ್ಯ ಸರ್ಕಾರದ ವಿರುದ್ಧ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ರೈತರಿಗೆ ಪರಿಹಾರ ನೀಡುವ ಬದಲು ವಿವಿಧ ದಾಖಲೆಗಳ ನೆಪವೊಡ್ಡಿ ಸರ್ಕಾರಿ ಕಚೇರಿಗಳಿಗೆ ಅಲೆದಾಡಿಸುವ ಕೆಲಸ ಮಾಡಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಪ್ರಶ್ನಿಸಿರುವ ಅವರು, ಮುಂಗಾರು ಮಳೆ ಕೈಕೊಟ್ಟು ನಾಲ್ಕು ತಿಂಗಳು ಕಳೆದಿದ್ದರೂ ಬೆಳೆಹಾನಿ ಮಾಹಿತಿ ಸಂಗ್ರಹಿಸಿ ಪರಿಹಾರದ ಪಟ್ಟಿ



ಸಿದ್ಧಪಡಿಸುವಲ್ಲಿ ಸರ್ಕಾರ ವಿಳಂಬ ಮಾಡಿರುವುದು ಏಕೆ ಎಂದು ಪ್ರಶ್ನಿಸಿದ್ದಾರೆ.

ಫ್ರೂಟ್ಸ್ (ಈಖಿಗಖಖಿಖ) ತಂತ್ರಾಂಶ, ಆಧಾರ್ ಲಿಂಕ್, ಬ್ಯಾಂಕ್ ಖಾತೆ ಹಾಗೂ ಆರ್‌ಟಿಸಿ ದಾಖಲೆಗಳ ಹೆಸರಿನಲ್ಲಿ ಹತ್ತಾರು ಷರತ್ತುಗಳನ್ನು ವಿಧಿಸಲಾಗುತ್ತಿದೆ. ಈಗಾಗಲೇ ಬೆಳೆ ಕಳೆದುಕೊಂಡು ಸಂಕಷ್ಟದಲ್ಲಿರುವ ರೈತರು ಪರಿಹಾರ ಪಡೆಯಲು ಮತ್ತಷ್ಟು ತೊಂದರೆ ಅನುಭವಿಸುವಂತಾಗಿದೆ. ತಾಂತ್ರಿಕ ಸಮಸ್ಯೆ ಹಾಗೂ ದಾಖಲೆಗಳ ಗೊಂದಲಗಳನ್ನು ಪರಿಹರಿಸುವ ಜವಾಬ್ದಾರಿ ಸರ್ಕಾರದ್ದೇ ಹೊರತು ರೈತರದ್ದಲ್ಲ ಎಂದು ಟೀಕಿಸಿದ್ದಾರೆ.

ಹಿಂದಿನ ಬರ ಪರಿಹಾರ ಹಾಗೂ ಬೆಳೆಹಾನಿ ಪರಿಹಾರ ವಿತರಣೆಯಲ್ಲಿನ ಲೋಪಗಳಿಂದ ಸರ್ಕಾರ ಪಾಠ ಕಲಿತಿಲ್ಲ. ಈ ಬಾರಿಯೂ ಅದೇ ರೀತಿಯ ಸಮಸ್ಯೆಗಳು ಮರುಕಳಿಸುವ ಆತಂಕವಿದೆ. ರೈತರಿಗೆ ಪರಿಹಾರ ನೀಡುವ ಇಚ್ಛಾಶಕ್ತಿ ಸರ್ಕಾರಕ್ಕಿದೆಯೇ ಅಥವಾ ಖಜಾನೆಯಲ್ಲಿ ಹಣದ ಕೊರತೆ ಇದೆಯೇ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಅರ್ಹ ರೈತರ ಪಟ್ಟಿಯನ್ನು ತಕ್ಷಣ ಅಂತಿಮಗೊಳಿಸಬೇಕು, ಫ್ರೂಟ್ಸ್ ತಂತ್ರಾಂಶ ಹಾಗೂ ಆಧಾರ್ ಜೋಡಣೆಯಲ್ಲಿನ ತಾಂತ್ರಿಕ ಸಮಸ್ಯೆಗಳನ್ನು ಸರ್ಕಾರವೇ ಸರಿಪಡಿಸಬೇಕು. ಅರ್ಹ ರೈತರ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ (ಡಿಬಿಟಿ) ಮೂಲಕ ಪರಿಹಾರದ ಹಣವನ್ನು ವಿಳಂಬವಿಲ್ಲದೆ ಜಮೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ರೈತರ ಬೆಳೆ ನಷ್ಟಕ್ಕೆ ಪರಿಹಾರ ಕೇಳುವುದು ಭಿಕ್ಷೆಯಲ್ಲ, ಅದು ಅವರ ಹಕ್ಕು. ರೈತರ ಸಂಕಷ್ಟಕ್ಕೆ ಸ್ಪಂದಿಸದಿದ್ದರೆ ಸರ್ಕಾರದ ವಿರುದ್ಧ ಹೋರಾಟ ಅನಿವಾರ್ಯವಾಗಲಿದೆ ಎಂದು ಎಚ್ಚರಿಸಿರುವ ಆರ್. ಅಶೋಕ್, ಪರಿಹಾರ ನೀಡಲು ಸಾಧ್ಯವಾಗದಿದ್ದರೆ ಮುಖ್ಯಮಂತ್ರಿ ರಾಜೀನಾಮೆ ನೀಡಲಿ ಎಂದು ಆಗ್ರಹಿಸಿದ್ದಾರೆ.

ವಾಕ್ ಮತ್ತು ಶ್ರವಣ ದೋಷ ಹೊಂದಿರುವವರಿಗೆ ಸಮಾನ ಅವಕಾಶ ಕಲ್ಪಿಸುವುದು ಸಮಾಜದ ಜವಾಬ್ದಾರಿ



"ಮುಂಜಾನೆಯ ಮೆರಗು"

ಬೆಂಗಳೂರು ಅ. 30- ವಾಕ್ ಮತ್ತು ಶ್ರವಣ ದೋಷ ಹೊಂದಿರುವವರು ಸಮಾಜದ ಮುಖ್ಯವಾಹಿನಿಯಲ್ಲಿ ಆತ್ಮವಿಶ್ವಾಸದಿಂದ ಬದುಕಲು ಅಗತ್ಯವಾದ ಅವಕಾಶ, ಪ್ರೋತ್ಸಾಹ ಹಾಗೂ ಸೂಕ್ತ ಬೆಂಬಲ ಒದಗಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ವಿಧಾನಸಭೆಯ ಸಭಾಧ್ಯಕ್ಷ ಯು.ಟಿ. ಖಾದರ್ ತಿಳಿಸಿದರು.

ನಗರದ ಲಿಂಗರಾಜಪುರಂನಲ್ಲಿರುವ ಡಾ. ಎಸ್.ಆರ್. ಚಂದ್ರಶೇಖರ್ ವಾಕ್ ಮತ್ತು ಶ್ರವಣ ಸಂಸ್ಥೆಯ 49ನೇ ಸಂಸ್ಥಾಪನಾ ದಿನಾಚರಣೆ ಹಾಗೂ ಪದವಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಂಡು ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿ ಅವರು ಮಾತನಾಡಿದರು.

ಸಂವಹನದ ಸವಾಲುಗಳು ಯಾರೊಬ್ಬರ ಕನಸು, ಶಿಕ್ಷಣ ಹಾಗೂ ಸಾಧನೆಗೆ ಅಡ್ಡಿಯಾಗಬಾರದು. ವಾಕ್ ಮತ್ತು ಶ್ರವಣ ಸಮಸ್ಯೆ ಹೊಂದಿರುವವರಿಗೆ ಆರಂಭದಲ್ಲಿಯೇ ಸೂಕ್ತ ಚಿಕಿತ್ಸೆ, ತರಬೇತಿ ಹಾಗೂ ಪುನರ್ವಸತಿ ಸೌಲಭ್ಯಗಳು ದೊರೆಯುವಂತಾಗಬೇಕು. ಈ ನಿಟ್ಟಿನಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದರ ಜತೆಗೆ ಶಿಕ್ಷಣ, ಉದ್ಯೋಗ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲೂ ಸಮಾನ ಅವಕಾಶ ಕಲ್ಪಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ವಾಕ್ ಮತ್ತು ಶ್ರವಣ ದೋಷ ಹೊಂದಿರುವ ವ್ಯಕ್ತಿಗಳಲ್ಲಿಯೂ ಅಪಾರ ಪ್ರತಿಭೆ ಹಾಗೂ ಸಾಧಿಸುವ ಸಾಮರ್ಥ್ಯವಿದೆ. ಅವರಿಗೆ ಸೂಕ್ತ ಮಾರ್ಗದರ್ಶನ ಮತ್ತು ಪ್ರೋತ್ಸಾಹ ದೊರೆತರೆ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಯಶಸ್ಸು ಸಾಧಿಸಲು ಸಾಧ್ಯ. ಇಂತಹವರ ಆತ್ಮವಿಶ್ವಾಸ ಹೆಚ್ಚಿಸುವ ಮತ್ತು ಸ್ವಾವಲಂಬಿ ಬದುಕಿಗೆ ನೆರವಾಗುವ ಸಂಸ್ಥೆಗಳ ಸೇವೆ ಶ್ಲಾಘನೀಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಸಂಸ್ಥೆಯ ಮಾಜಿ ಅಧ್ಯಕ್ಷರು ಹಾಗೂ ನಿರ್ದೇಶಕರಾದ ಡಾ. ಎಂ.ಎಸ್. ವೆಂಕಟೇಶ್ ಅವರಿಗೆ ಡಾ. ಎಸ್.ಆರ್.ಸಿ. ಸ್ಮಾರಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ನಸೀಮಾ ಇನ್‌ಸ್ಟಿಟ್ಯೂಟ್ ಆಫ್ ಸ್ಪೀಚ್ ಆ್ಯಂಡ್ ಹಿಯರಿಂಗ್ (ಓಂಖಖಊ), ಬೆಂಗಳೂರು ಅಧ್ಯಕ್ಷ ಯು.ಟಿ. ಜುಲ್ಫಿಕರ್ ಅಲಿ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಹಾಗೂ ಆದಿಚುಂಚನಗಿರಿ ವಿಶ್ವವಿದ್ಯಾಲಯಗಳ ಮಾಜಿ ಕುಲಪತಿ ಪ್ರೊ. ಡಾ. ಎಸ್. ಚಂದ್ರಶೇಖರ್ ಶೆಟ್ಟಿ, ಡಾ. ಎಸ್.ಆರ್. ಚಂದ್ರಶೇಖರ್ ವಾಕ್ ಮತ್ತು ಶ್ರವಣ ಸಂಸ್ಥೆಯ ಅಧ್ಯಕ್ಷ ಹಾಗೂ ನಿರ್ದೇಶಕ ಲಯನ್ ವಿ.ವಿ. ಕೃಷ್ಣ ರೆಡ್ಡಿ ಸೇರಿದಂತೆ ಗಣ್ಯರು, ಸಂಸ್ಥೆಯ ಪದಾಧಿಕಾರಿಗಳು, ಬೋಧಕ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಶಿವಮೊಗ್ಗಕ್ಕೆ ಹೈಕೋರ್ಟ್ ಸರ್ಕ್ಯೂಟ್ ಪೀಠ ಸ್ಥಾಪನೆಗೆ ಆಗ್ರಹಿಸಿ ಧರಣಿ: ಸಂಸದ ಬಿ.ವೈ. ರಾಘವೇಂದ್ರ ಬೆಂಬಲ

"ಮುಂಜಾನೆಯ ಮೆರಗು"

ಶಿವಮೊಗ್ಗ ಅ. 30- ಮಲೆನಾಡು ಹಾಗೂ ಸುತ್ತಮುತ್ತಲಿನ ಜಿಲ್ಲೆಗಳ ಜನರಿಗೆ ತ್ವರಿತವಾಗಿ ಮತ್ತು ಕಡಿಮೆ ವೆಚ್ಚದಲ್ಲಿ ನ್ಯಾಯ ದೊರಕಿಸಿಕೊಡುವ ಉದ್ದೇಶದಿಂದ ಶಿವಮೊಗ್ಗದಲ್ಲಿ ಕರ್ನಾಟಕ ಹೈಕೋರ್ಟ್‌ನ ಸರ್ಕ್ಯೂಟ್ ಪೀಠ ಸ್ಥಾಪಿಸಬೇಕೆಂಬ ಬೇಡಿಕೆ ಮತ್ತೊಮ್ಮೆ ಮುನ್ನೆಲೆಗೆ ಬಂದಿದೆ.

ಈ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಜಿಲ್ಲಾ ವಕೀಲರ ಸಂಘ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕ ಹಾಗೂ ವಿವಿಧ ಸಂಘಟನೆಗಳ ಒಕ್ಕೂಟದ ವತಿಯಿಂದ ನಗರದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಧರಣಿ ಸತ್ಯಾಗ್ರಹದಲ್ಲಿ ಸಂಸದ ಬಿ.ವೈ. ರಾಘವೇಂದ್ರ ಭಾಗವಹಿಸಿ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ



ಅವರು, ಶಿವಮೊಗ್ಗದಲ್ಲಿ ಹೈಕೋರ್ಟ್ ಸರ್ಕ್ಯೂಟ್ ಪೀಠ ಸ್ಥಾಪನೆಯಾದರೆ ಮಲೆನಾಡು ಸೇರಿದಂತೆ ಸುತ್ತಮುತ್ತಲಿನ ಜಿಲ್ಲೆಗಳ ಸಾವಿರಾರು ಕಕ್ಷಿದಾರರಿಗೆ ಅನುಕೂಲವಾಗಲಿದೆ. ದೂರದ ನ್ಯಾಯಾಲಯಗಳಿಗೆ ತೆರಳಲು ತಗಲುವ ಪ್ರಯಾಣದ ವೆಚ್ಚ, ಸಮಯ ಹಾಗೂ ಇತರ ಆರ್ಥಿಕ ಹೊರೆಯನ್ನು ಕಡಿಮೆ ಮಾಡಲು ಸಾಧ್ಯವಾಗಲಿದೆ. ಜನಸಾಮಾನ್ಯರಿಗೆ ನ್ಯಾಯದಾನ ಪ್ರಕ್ರಿಯೆ ಮತ್ತಷ್ಟು ಸುಲಭವಾಗಿ ತಲುಪಲಿದೆ

ಬರ ನಿರ್ವಹಣೆಗೆ ನಾವೀನ್ಯತಾ ಕೃಷಿ ಅಗತ್ಯ: ಶಿವಮೊಗ್ಗದಲ್ಲಿ ಕೃಷಿ ಮತ್ತು ತೋಟಗಾರಿಕೆ ಮೇಳ–2026 ಉದ್ಘಾಟನೆ

"ಮುಂಜಾನೆಯ ಮೆರಗು"

ಶಿವಮೊಗ್ಗ ಅ. 30– ಆಧುನಿಕ ತಂತ್ರಜ್ಞಾನ ಹಾಗೂ ನೂತನ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವ ಮೂಲಕ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಿ, ರೈತರ ಆದಾಯ ಮತ್ತು ಜೀವನಮಟ್ಟ ಸುಧಾರಿಸಲು ಕೃಷಿ ಮೇಳಗಳು ಸಹಕಾರಿಯಾಗಲಿವೆ ಎಂದು ಸಂಸದ ಬಿ.ವೈ. ರಾಘವೇಂದ್ರ ಅಭಿಪ್ರಾಯಪಟ್ಟರು.

ನಗರದ ನವಿಲೆಯ ಕೃಷಿ ಮಹಾವಿದ್ಯಾಲಯದ ಆವರಣದಲ್ಲಿ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಹಾಗೂ ಕೃಷಿ ಮತ್ತು ಕೃಷಿ ಸಂಬಂಧಿತ ಅಭಿವೃದ್ಧಿ ಇಲಾಖೆಗಳ ಜಂಟಿ ಸಹಯೋಗದಲ್ಲಿ ಆಯೋಜಿಸಲಾಗಿದ್ದ 'ಕೃಷಿ ಮತ್ತು ತೋಟಗಾರಿಕೆ ಮೇಳ–2026' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

'ಬರ ನಿರ್ವಹಣೆಗಾಗಿ ನಾವೀನ್ಯತಾ ಕೃಷಿ' ಎಂಬ ಧ್ಯೇಯವಾಕ್ಯದೊಂದಿಗೆ ಆಯೋಜಿಸಿರುವ ಈ ಮೇಳವು ರೈತರಿಗೆ ಆಧುನಿಕ ಕೃಷಿ ತಂತ್ರಜ್ಞಾನ, ಸುಧಾರಿತ ಬೇಸಾಯ ಪದ್ಧತಿಗಳು, ನೀರಿನ ಸಮರ್ಪಕ ಬಳಕೆ ಹಾಗೂ ತೋಟಗಾರಿಕೆ ಕ್ಷೇತ್ರದಲ್ಲಿನ ಹೊಸ ಆವಿಷ್ಕಾರಗಳ ಕುರಿತು ಮಾಹಿತಿ ಪಡೆಯಲು ಉತ್ತಮ ವೇದಿಕೆಯಾಗಲಿದೆ ಎಂದರು.



ಬದಲಾಗುತ್ತಿರುವ ಹವಾಮಾನ ಪರಿಸ್ಥಿತಿ, ಅನಿಯಮಿತ ಮಳೆ ಹಾಗೂ ನೀರಿನ ಕೊರತೆಯಂತಹ ಸವಾಲುಗಳನ್ನು ಎದುರಿಸಲು ರೈತರು ಸಾಂಪ್ರದಾಯಿಕ ಕೃಷಿಯೊಂದಿಗೆ ವೈಜ್ಞಾನಿಕ ಮತ್ತು ತಂತ್ರಜ್ಞಾನ ಆಧಾರಿತ ಕೃಷಿ ಪದ್ಧತಿಗಳನ್ನೂ ಅಳವಡಿಸಿಕೊಳ್ಳಬೇಕಿದೆ. ಕೃಷಿ ವಿಜ್ಞಾನಿಗಳು ಸಂಶೋಧನೆಗಳ ಮೂಲಕ ಅಭಿವೃದ್ಧಿಪಡಿಸಿರುವ ನೂತನ ತಳಿಗಳು, ಕಡಿಮೆ ನೀರಿನಲ್ಲಿ ಹೆಚ್ಚು ಇಳುವರಿ ಪಡೆಯುವ ವಿಧಾನಗಳು ಹಾಗೂ ಮಣ್ಣಿನ ಫಲವತ್ತತೆ ಕಾಪಾಡುವ ತಂತ್ರಜ್ಞಾನಗಳನ್ನು ರೈತರಿಗೆ ತಲುಪಿಸುವಲ್ಲಿ ಇಂತಹ ಮೇಳಗಳು ಪ್ರಮುಖ ಪಾತ್ರ ವಹಿಸಲಿವೆ ಎಂದು ತಿಳಿಸಿದರು.

ಮೇಳದಲ್ಲಿ ಕೃಷಿ ಮತ್ತು ತೋಟಗಾರಿಕೆ ಕ್ಷೇತ್ರಕ್ಕೆ ಸಂಬಂಧಿಸಿದ ವಿವಿಧ ತಾಂತ್ರಿಕ ಪ್ರದರ್ಶನಗಳು, ನೂತನ ಕೃಷಿ ಪರಿಕರಗಳು ಹಾಗೂ ವೈಜ್ಞಾನಿಕ ಬೇಸಾಯ ಪದ್ಧತಿಗಳ ಕುರಿತು ರೈತರಿಗೆ ಮಾಹಿತಿ ಒದಗಿಸುವ ವ್ಯವಸ್ಥೆ ಮಾಡಲಾಗಿತ್ತು. ರೈತರು ವಿಜ್ಞಾನಿಗಳೊಂದಿಗೆ ಸಂವಾದ ನಡೆಸಿ ತಮ್ಮ ಕೃಷಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಕೃಷಿ ಸಚಿವ ನರೇಂದ್ರ ಸ್ವಾಮಿ, ಶಾಸಕರಾದ ಶಾರದಾ ಪೂರ್ಯ ನಾಯ್ಕ್, ಚನ್ನಬಸಪ್ಪ, ವಿಶ್ವವಿದ್ಯಾಲಯದ ಕುಲಪತಿ ಧನಂಜಯ, ಪದ್ಮಶ್ರೀ ಪುರಸ್ಕೃತ ಪ್ರಗತಿಪರ ರೈತ ಸತ್ಯನಾರಾಯಣ, ರಾಜ್ಯ ರೈತ ಮೋರ್ಚಾ ಅಧ್ಯಕ್ಷ ನಗರದ ಮಹಾದೇವಪ್ಪ, ಜವಳಿ ನಿಗಮದ ಅಧ್ಯಕ್ಷ ಚೇತನ್, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ, ಹಾಪ್‌ಕಾಮ್ಸ್ ಅಧ್ಯಕ್ಷ ವಿಜಯಕುಮಾರ್, ನಾಮನಿರ್ದೇಶಿತ ಸದಸ್ಯರಾದ ದೇವಿಪ್ರಸಾದ್, ಶಶಾಂಕ್, ಕಾವೇರಿಯಪ್ಪ ಸೇರಿದಂತೆ ವಿವಿಧ ಕೃಷಿ ವಿಶ್ವವಿದ್ಯಾಲಯಗಳ ಕುಲಪತಿಗಳು, ವಿಜ್ಞಾನಿಗಳು, ರೈತರು ಹಾಗೂ ಮಾಧ್ಯಮ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಬದರೀನಾಥ ಹೆಲಿಕಾಪ್ಟರ್ ದುರಂತ: ಐವರು ಕನ್ನಡಿಗರು ಸೇರಿ ಆರು ಮಂದಿ ಸಾವು

"ಮುಂಜಾನೆಯ ಮೆರಗು"

ಬೆಂಗಳೂರು ಅ. 30– ಉತ್ತರಾಖಂಡದ ಪ್ರಸಿದ್ಧ ತೀರ್ಥಕ್ಷೇತ್ರ ಬದರೀನಾಥದಿಂದ ಡೆಹ್ರಾಡೂನ್‌ಗೆ ಪ್ರಯಾಣಿಸುತ್ತಿದ್ದ ಹೆಲಿಕಾಪ್ಟರ್ ಜೋಶಿಮಠ ಸಮೀಪ ಪತನಗೊಂಡು, ಐವರು ಕನ್ನಡಿಗರು ಸೇರಿದಂತೆ ಆರು ಮಂದಿ ಮೃತಪಟ್ಟಿರುವ ಘಟನೆಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತೀವ್ರ ಆಘಾತ ಮತ್ತು ಸಂತಾಪ ವ್ಯಕ್ತಪಡಿಸಿದ್ದಾರೆ.



ಈ ಕುರಿತು ಪ್ರತಿಕ್ರಿಯಿಸಿರುವ ಅವರು, ಪವಿತ್ರ ಬದರೀನಾಥ ತೀರ್ಥಕ್ಷೇತ್ರದ ದರ್ಶನ ಮುಗಿಸಿ ಹಿಂದಿರುಗುತ್ತಿದ್ದ ಸಂದರ್ಭದಲ್ಲಿ ಪ್ರತಿಕೂಲ ಹವಾಮಾನದಿಂದಾಗಿ ಹೆಲಿಕಾಪ್ಟರ್ ದುರಂತ ಸಂಭವಿಸಿದೆ ಎನ್ನಲಾಗಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ. ಈ ಅನಿರೀಕ್ಷಿತ ಘಟನೆ ಮನಸ್ಸಿಗೆ ತೀವ್ರ ದುಃಖ ಉಂಟುಮಾಡಿದೆ ಎಂದು ತಿಳಿಸಿದ್ದಾರೆ.

ದುರಂತದಲ್ಲಿ ಪ್ರಾಣ ಕಳೆದುಕೊಂಡ ಎಲ್ಲ ಯಾತ್ರಾರ್ಥಿಗಳಿಗೆ ಸದ್ಗತಿ ದೊರೆಯಲಿ. ಅಗಲಿದವರ ಕುಟುಂಬ ಸದಸ್ಯರಿಗೆ ಈ ಅಪಾರ ದುಃಖವನ್ನು ಸಹಿಸುವ ಶಕ್ತಿಯನ್ನು ಭಗವಂತ ಕರುಣಿಸಲಿ ಎಂದು ಪ್ರಾರ್ಥಿಸಿರುವ ಅವರು, ಮೃತರ ಕುಟುಂಬಗಳಿಗೆ ತಮ್ಮ ತೀವ್ರ ಸಂತಾಪಗಳನ್ನು ಸಲ್ಲಿಸಿದ್ದಾರೆ.

ಅಲ್ಲದೆ, ರಾಜ್ಯ ಸರ್ಕಾರ ಕೂಡಲೇ ಉತ್ತರಾಖಂಡ ಸರ್ಕಾರದೊಂದಿಗೆ ಸಂಪರ್ಕ ಸಾಧಿಸಿ, ಮೃತರ ಕುಟುಂಬಗಳಿಗೆ ಅಗತ್ಯ ನೆರವು ಒದಗಿಸುವುದು ಸೇರಿದಂತೆ ಮುಂದಿನ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಸಾವಯವ ಕೃಷಿ, ಮಣ್ಣಿನ ಆರೋಗ್ಯ ಸಂರಕ್ಷಣೆಗೆ ಶೋಭಾ ಕರಂದ್ಲಾಜೆ ಕರೆ

"ಮುಂಜಾನೆಯ ಮೆರಗು"

ಬೆಂಗಳೂರು ಅ. 30– ನಗರದ ಐಸಿಎಆರ್–ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ (ಐಐಎಚ್‌ಆರ್) ಆವರಣದಲ್ಲಿ ಆಯೋಜಿಸಿದ್ದ 'ಪಿಎಂ–ಕಿಸಾನ್ ಉತ್ಸವ ದಿವಸ್' ಹಾಗೂ 'ಖೇತ್ ಬಚಾವೋ ಅಭಿಯಾನ' ಕಾರ್ಯಕ್ರಮದಲ್ಲಿ ಸಂಸದೆ ಶೋಭಾ ಕರಂದ್ಲಾಜೆ ಪಾಲ್ಗೊಂಡು, ರೈತರು ಸಾವಯವ ಮತ್ತು ಸುಸ್ಥಿರ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವಂತೆ ಕರೆ ನೀಡಿದರು.

ಗುಜರಾತ್‌ನ ಬನಸ್ಕಾಂತದಲ್ಲಿ ನಡೆದ ಕಾರ್ಯಕ್ರಮದ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರು ಪಿಎಂ–ಕಿಸಾನ್ ಯೋಜನೆಯ 24ನೇ ಕಂತಿನ ಹಣ ವರ್ಗಾವಣೆಗೆ ಚಾಲನೆ ನೀಡಿದರು. ಈ ಕಂತಿನಡಿ 9.34 ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ಒಟ್ಟು 18,690 ಕೋಟಿ ಹಣ ಜಮೆಯಾಗಲಿದೆ ಎಂದು ತಿಳಿಸಲಾಯಿತು.



ಕಾರ್ಯಕ್ರಮದಲ್ಲಿ ಮಾತನಾಡಿದ ಶೋಭಾ ಕರಂದ್ಲಾಜೆ, ಮಣ್ಣಿನ ಆರೋಗ್ಯ ಮತ್ತು ಸಸ್ಯಗಳ ಬೆಳವಣಿಗೆಯನ್ನು ಕಾಪಾಡಲು ರೈತರು ಪರಿಸರ ಸ್ನೇಹಿ ಕೃಷಿ ಪದ್ಧತಿಗಳಿಗೆ ಆದ್ಯತೆ ನೀಡಬೇಕು. ಸಾವಯವ ಕೃಷಿಯಿಂದ ಮಣ್ಣಿನ ಫಲವತ್ತತೆ ಹೆಚ್ಚುವುದರ ಜೊತೆಗೆ ಆರೋಗ್ಯಕರ ಆಹಾರ ಉತ್ಪಾದನೆಗೂ ಉತ್ತೇಜನ ದೊರೆಯಲಿದೆ. ಆರೋಗ್ಯಕರ ಮಣ್ಣಿನಿಂದ ಪೌಷ್ಟಿಕ ಆಹಾರದವರೆಗೆ ಸಂಪೂರ್ಣ ಆಹಾರ ಸರಪಳಿಯ ಸಂರಕ್ಷಣೆ ಅತ್ಯಂತ ಅಗತ್ಯ ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ರೈತರಿಗೆ ಕೃಷಿ ಪರಿಕರಗಳನ್ನು ವಿತರಿಸುವುದರ ಜೊತೆಗೆ ಸುಸ್ಥಿರ ಕೃಷಿ, ಮಣ್ಣಿನ ಆರೋಗ್ಯ ಮತ್ತು ನೀರಿನ ಸಂರಕ್ಷಣೆ ಕುರಿತು ಚರ್ಚೆ ನಡೆಸಲಾಯಿತು.

ರೈತರನ್ನು ಸಬಲೀಕರಣಗೊಳಿಸುವುದು, ಕೃಷಿ ಕ್ಷೇತ್ರವನ್ನು ಬಲಪಡಿಸುವುದು ಹಾಗೂ ಸುಸ್ಥಿರ ಕೃಷಿಯ ಮೂಲಕ ವಿಕಸಿತ ಭಾರತ ನಿರ್ಮಾಣಕ್ಕೆ ಕೊಡುಗೆ ನೀಡುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿತ್ತು.

ಐಸಿಎಆರ್–ಐಐಎಚ್‌ಆರ್ ನಿರ್ದೇಶಕ ಡಾ. ತುಸಾರ್ ಬೆಹೆರಾ, ಸಮಾಜ ವಿಜ್ಞಾನ ವಿಭಾಗದ ಪ್ರಧಾನ ವಿಜ್ಞಾನಿ ಹಾಗೂ ಮುಖ್ಯಸ್ಥ ಡಾ. ಆರ್. ಸೆಂಥಿಲ್ ಕುಮಾರ್, ಪ್ರಧಾನ ವಿಜ್ಞಾನಿ ಡಾ. ಬಿ. ಬಾಲಕೃಷ್ಣ ಸೇರಿದಂತೆ ಸಂಸ್ಥೆಯ ಅಧಿಕಾರಿಗಳು ಹಾಗೂ ಕೃಷಿ ಕ್ಷೇತ್ರದ ಪ್ರತಿನಿಧಿಗಳು ಉಪಸ್ಥಿತರಿದ್ದರು.

362 ಗೆಜೆಟೆಡ್ ಪ್ರೊಬೇಷನರಿ ಅಧಿಕಾರಿಗಳಿಂದ ಮುಖ್ಯಮಂತ್ರಿ ಭೇಟಿ

"ಮುಂಜಾನೆಯ ಮೆರಗು"

ಬೆಂಗಳೂರು ಅ. 30– 2011ನೇ ಸಾಲಿನಲ್ಲಿ ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಮೂಲಕ ಆಯ್ಕೆಯಾಗಿದ್ದ 362 ಗೆಜೆಟೆಡ್ ಪ್ರೊಬೇಷನರಿ ಅಧಿಕಾರಿಗಳ ನೇಮಕಾತಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಜಾರಿಗೆ ತಂದಿದ್ದ ಕಾಯ್ದೆಯನ್ನು ಸುಪ್ರೀಂಕೋರ್ಟ್ ಅಸಂವಿಧಾನಿಕ ಎಂದು ಘೋಷಿಸಿ ರದ್ದುಪಡಿಸಿರುವ ಹಿನ್ನೆಲೆಯಲ್ಲಿ, ಪ್ರಸ್ತುತ ಸೇವೆಯಲ್ಲಿರುವ ಅಧಿಕಾರಿಗಳು ತಮ್ಮ ಭವಿಷ್ಯದ ಕುರಿತು ಆತಂಕ ವ್ಯಕ್ತಪಡಿಸಿದ್ದಾರೆ.



ಈ ಹಿನ್ನೆಲೆಯಲ್ಲಿ ಅಧಿಕಾರಿಗಳ ನಿಯೋಗವು ಇಂದು ವಿಧಾನಸೌಧದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ, ತಮ್ಮ ನೇಮಕಾತಿಗೆ ಸಂಬಂಧಿಸಿದಂತೆ ಎದುರಾಗಿರುವ ಕಾನೂನು ಮತ್ತು ಆಡಳಿತಾತ್ಮಕ ಸಮಸ್ಯೆಗಳನ್ನು ವಿವರಿಸಿತು.

ಸುಪ್ರೀಂಕೋರ್ಟ್ ತೀರ್ಪಿನಿಂದಾಗಿ ಪ್ರಸ್ತುತ ಸೇವೆಯಲ್ಲಿರುವ 362 ಅಧಿಕಾರಿಗಳ ಮೇಲೆ ಉಂಟಾಗಬಹುದಾದ ಪರಿಣಾಮಗಳ ಕುರಿತು ಮುಖ್ಯಮಂತ್ರಿಗಳ ಗಮನ ಸೆಳೆದ ಅಧಿಕಾರಿಗಳು, ತಮ್ಮ ಸೇವಾ ಭದ್ರತೆ ಹಾಗೂ ಭವಿಷ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳಲು ಸರ್ಕಾರ ಮಧ್ಯಪ್ರವೇಶಿಸಬೇಕು ಎಂದು ಮನವಿ ಸಲ್ಲಿಸಿದರು.

ಅಧಿಕಾರಿಗಳ ಮನವಿಯನ್ನು ಆಲಿಸಿದ ಮುಖ್ಯಮಂತ್ರಿ ಈ ವಿಚಾರದಲ್ಲಿ ಸರ್ಕಾರದ ಮಟ್ಟದಲ್ಲಿ ಅಗತ್ಯ ಪರಿಶೀಲನೆ ನಡೆಸುವಂತೆ ಮನವಿ ಸ್ವೀಕರಿಸಿದರು ಎಂದು ತಿಳಿದುಬಂದಿದೆ.

10 ಬೀದಿ ಬದಿ ವ್ಯಾಪಾರಸ್ಥರಿಗೆ ತಳ್ಳುಗಾಡಿ ವಿತರಣೆ: ಶಾಸಕ ನಾರಾ ಭರತ್ ರೆಡ್ಡಿ

"ಮುಂಜಾನೆಯ ಮೆರಗು"

ಬಳ್ಳಾರಿ ಅ. 30– ಬೀದಿ ಬದಿ ವ್ಯಾಪಾರಸ್ಥರ ಸ್ವಾವಲಂಬಿ ಬದುಕಿಗೆ ನೆರವಾಗುವ ಉದ್ದೇಶದಿಂದ ಟಚ್ ಫಾರ್ ಲೈಫ್ ಫೌಂಡೇಶನ್ ವತಿಯಿಂದ 10 ಮಂದಿ ಬೀದಿ ಬದಿ ವ್ಯಾಪಾರಸ್ಥರಿಗೆ ತಳ್ಳುಗಾಡಿಗಳನ್ನು ಶಾಸಕ ನಾರಾ ಭರತ್ ರೆಡ್ಡಿ ವಿತರಿಸಿದರು.

ಬಳ್ಳಾರಿ ಮಹಾನಗರ ಪಾಲಿಕೆ ಸಮೀಪದ ಗಾಂಧಿ ಭವನದ ಎದುರು ಈ ಹಿಂದೆ ವ್ಯಾಪಾರ ನಡೆಸುತ್ತಿದ್ದ 10 ಮಂದಿ ವ್ಯಾಪಾರಸ್ಥರಿಗೆ ವ್ಯಾಪಾರ ಮುಂದುವರಿಸಲು ಅನುಕೂಲವಾಗುವಂತೆ ತಳ್ಳುಗಾಡಿಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ನಾರಾ ಭರತ್ ರೆಡ್ಡಿ, ಈ ಹಿಂದೆ ವ್ಯಾಪಾರಸ್ಥರು ಬಿಸಿಲಿನಲ್ಲಿಯೇ ನಿಂತು ವ್ಯಾಪಾರ ಮಾಡಬೇಕಾದ ಪರಿಸ್ಥಿತಿಯಿತ್ತು. ಗಡಿಗಿ ಚೆನ್ನಪ್ಪ ವೃತ್ತದ ರಸ್ತೆ ಅಭಿವೃದ್ಧಿ ಕಾಮಗಾರಿ ಆರಂಭವಾದ ಸಂದರ್ಭದಲ್ಲಿ ವ್ಯಾಪಾರಸ್ಥರಿಗೆ ಸೂಕ್ತ ವ್ಯವಸ್ಥೆ ಕಲ್ಪಿಸುವ ಭರವಸೆ ನೀಡಿದ್ದೆ. ಇದೀಗ ಆ ಭರವಸೆಯನ್ನು ಈಡೇರಿಸಿರುವುದು ಸಂತಸ ತಂದಿದೆ ಎಂದು ತಿಳಿಸಿದರು.

ಬೀದಿ ಬದಿ ವ್ಯಾಪಾರಸ್ಥರು ತಮ್ಮ ಕುಟುಂಬದ ಜೀವನ ನಿರ್ವಹಣೆಗಾಗಿ ಶ್ರಮಿಸುತ್ತಿದ್ದು, ಅವರಿಗೆ ಅಗತ್ಯ ನೆರವು ನೀಡುವ ಮೂಲಕ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಪ್ರೋತ್ಸಾಹಿಸುವುದು ಈ ಕಾರ್ಯದ ಮುಖ್ಯ ಉದ್ದೇಶವಾಗಿದೆ. ತಳ್ಳುಗಾಡಿಗಳಿಂದ ವ್ಯಾಪಾರಸ್ಥರಿಗೆ ಅನುಕೂಲವಾಗಲಿದ್ದು, ಅವರ ಆರ್ಥಿಕ ಚಟುವಟಿಕೆಗಳಿಗೆ ನೆರವಾಗಲಿದೆ ಎಂದರು.



ತಳ್ಳುಗಾಡಿಗಳನ್ನು ಸ್ವೀಕರಿಸಿದ ವ್ಯಾಪಾರಸ್ಥರು ಸಂತಸ ವ್ಯಕ್ತಪಡಿಸಿ ಶಾಸಕರಿಗೆ ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಸದಸ್ಯ ನೂರ್ ಮೊಹಮ್ಮದ್, ಕಾಂಗ್ರೆಸ್ ಮುಖಂಡ ಬಿಆರ್‌ಎಲ್ ಸೀನಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕೆಎಸ್‌ಎಫ್‌ಸಿಯಿಂದ ರಾಜ್ಯ ಸರ್ಕಾರಕ್ಕೆ 28.84 ಕೋಟಿ ಲಾಭಾಂಶ ಹಸ್ತಾಂತರ

"ಮುಂಜಾನೆಯ ಮೆರಗು"

ಬೆಂಗಳೂರು ಅ. 30– ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ (ಕೆಎಸ್‌ಎಫ್‌ಸಿ) 2025–26ನೇ ಹಣಕಾಸು ವರ್ಷದಲ್ಲಿ ಉತ್ತಮ ಆರ್ಥಿಕ ಸಾಧನೆ ದಾಖಲಿಸಿದ್ದು, ರಾಜ್ಯ ಸರ್ಕಾರಕ್ಕೆ 28.84 ಕೋಟಿ ಲಾಭಾಂಶವನ್ನು ನೀಡಿದೆ.



ವಿಧಾನಸೌಧದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೆಎಸ್‌ಎಫ್‌ಸಿ ಅಧ್ಯಕ್ಷರೂ ಆಗಿರುವ ಆರ್ಥಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ 28.84 ಕೋಟಿ ಮೊತ್ತದ ಲಾಭಾಂಶದ ಚೆಕ್ ಹಸ್ತಾಂತರಿಸಿದರು.

2025–26ನೇ ಹಣಕಾಸು ವರ್ಷದಲ್ಲಿ ಸಂಸ್ಥೆಯು ವಿವಿಧ ಸಾಲ ಯೋಜನೆಗಳ ಮೂಲಕ ಒಟ್ಟು 1,086.67 ಕೋಟಿ ಸಾಲ ಮಂಜೂರು ಮಾಡಿದೆ. ಈ ಪೈಕಿ 722.15 ಕೋಟಿ ಸಾಲವನ್ನು ವಿತರಿಸಿದ್ದು, 790.32 ಕೋಟಿ ಸಾಲವನ್ನು ವಸೂಲಿ ಮಾಡಿದೆ. ಇದೇ ಅವಧಿಯಲ್ಲಿ ಸಂಸ್ಥೆಯು 155.23 ಕೋಟಿ ತೆರಿಗೆ ಪೂರ್ವ ಲಾಭ ಹಾಗೂ 100.01 ಕೋಟಿ ತೆರಿಗೆ ನಂತರದ ಲಾಭ ಗಳಿಸಿದೆ.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಯವರ ಕಾರ್ಯದರ್ಶಿ ಹಾಗೂ ಕೆಎಸ್‌ಎಫ್‌ಸಿ ವ್ಯವಸ್ಥಾಪಕ ನಿರ್ದೇಶಕ ಎಸ್. ಎಸ್. ನಕುಲ್, ಪ್ರಧಾನ ವ್ಯವಸ್ಥಾಪಕ ಮಂಜುನಾಥಸ್ವಾಮಿ ಬಿ.ಎಸ್. ಸೇರಿದಂತೆ ಸಂಸ್ಥೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಆದಿವಾಸಿಗಳ ಕಲ್ಯಾಣಕ್ಕೆ ಪ್ರತ್ಯೇಕ ಅಭಿವೃದ್ಧಿ ನಿಗಮ ಸ್ಥಾಪನೆಗೆ ಸಚಿವ ಸಂಪುಟ ಒಪ್ಪಿಗೆ: 33.36 ಕೋಟಿ ಅನುದಾನ ಮೀಸಲು

"ಮುಂಜಾನೆಯ ಮೆರಗು"

ಬೆಂಗಳೂರು ಅ. 30– ರಾಜ್ಯದ ಆದಿವಾಸಿ ಹಾಗೂ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪರಿಶಿಷ್ಟ ಪಂಗಡಗಳ ಸಮಗ್ರ ಅಭಿವೃದ್ಧಿಗೆ ಪ್ರತ್ಯೇಕವಾಗಿ 'ಕರ್ನಾಟಕ ಆದಿವಾಸಿ ಅಭಿವೃದ್ಧಿ ನಿಗಮ' ಸ್ಥಾಪಿಸಲು ರಾಜ್ಯ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ. ನೂತನ ನಿಗಮದ ಸ್ಥಾಪನೆ ಹಾಗೂ ಕಾರ್ಯನಿರ್ವಹಣೆಗೆ 33.36 ಕೋಟಿ ಅನುದಾನ ಮೀಸಲಿಡಲು ಉದ್ದೇಶಿಸಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ವಿಧಾನಸೌಧದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ. ಆರ್ಥಿಕ ಇಲಾಖೆಯು ನಿಗದಿಪಡಿಸಿರುವ ಅನುದಾನದ ಮಿತಿಯೊಳಗೆ ನಿಗಮದ ಸ್ಥಾಪನೆ ಹಾಗೂ ಅನುಷ್ಠಾನ ಪ್ರಕ್ರಿಯೆ ಕೈಗೊಳ್ಳಲು ಉದ್ದೇಶಿಸಲಾಗಿದೆ.

ರಾಜ್ಯದಲ್ಲಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಈಗಾಗಲೇ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಕರ್ನಾಟಕ ಮೇದಾರ ಅಭಿವೃದ್ಧಿ ನಿಗಮ ಹಾಗೂ ಅಲೆಮಾರಿ ಸಮುದಾಯಗಳ ಅಭಿವೃದ್ಧಿ ನಿಗಮಗಳು ಕಾರ್ಯನಿರ್ವಹಿಸುತ್ತಿವೆ. ಆದರೆ ಅರಣ್ಯ ಮತ್ತು ಅರಣ್ಯದಂಚಿನ ಪ್ರದೇಶಗಳಲ್ಲಿ ವಾಸಿಸುವ ಆದಿವಾಸಿ ಸಮುದಾಯಗಳ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ವಿಶೇಷ ಗಮನ ನೀಡುವ ಉದ್ದೇಶದಿಂದ ಪ್ರತ್ಯೇಕ ನಿಗಮದ ಅಗತ್ಯವನ್ನು ಸರ್ಕಾರ ಗುರುತಿಸಿದೆ.



ಇರುಳ, ಸೋಲಿಗ, ಜೇನುಕುರುಬ, ಕಾಡುಕುರುಬ, ಕುಡಿಯ ಹಾಗೂ ಸಿದ್ದಿ ಸೇರಿದಂತೆ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪರಿಶಿಷ್ಟ ಪಂಗಡಗಳ ಸಮುದಾಯಗಳ ಅಭಿವೃದ್ಧಿಗೆ ನೂತನ ನಿಗಮ ಕಾರ್ಯನಿರ್ವಹಿಸಲಿದೆ. ಸಚಿವ ಸಂಪುಟದ ಮುಂದೆ ಮಂಡಿಸಲಾದ ಪ್ರಸ್ತಾವನೆಯಂತೆ ಒಟ್

ನಮ್ಮ ಜಾಗದಲ್ಲಿ ಮನೆ ನಿರ್ಮಿಸಲು ಅಡ್ಡಿ: ತಾಲೂಕು ಕಚೇರಿ ಮುಂದೆ ಕುಟುಂಬದ ಅಹೋರಾತ್ರಿ ಧರಣಿ

ಮನೆಯ ಸಾಮಗ್ರಿಗಳೊಂದಿಗೆ ಆಗಮಿಸಿ ಪ್ರತಿಭಟನೆ; ನ್ಯಾಯ ಸಿಗುವವರೆಗೂ ಹೋರಾಟದ ಎಚ್ಚರಿಕೆ

"ಮುಂಜಾನೆಯ ಮೆರಗು"

ಜಗಳೂರು, ಅ.30– ಸ್ವಂತ ಜಾಗದಲ್ಲಿ ಮನೆ ನಿರ್ಮಿಸಿಕೊಳ್ಳಲು ಮುಂದಾದಾಗ ಗ್ರಾಮದ ಕೆಲವರು ಅಡ್ಡಿಪಡಿಸಿ ದೌರ್ಜನ್ಯ ಹಾಗೂ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿ ಕುಟುಂಬವೊಂದು ಅಂಬೇಡ್ಕರ್ ಅವರ ಭಾವಚಿತ್ರವನ್ನಿಟ್ಟು ಮನೆಯ ಸಾಮಗ್ರಿಗಳೊಂದಿಗೆ ತಾಲೂಕು ಕಚೇರಿ ಮುಂಭಾಗ ಶುಕ್ರವಾರ ಪ್ರತಿಭಟನೆ ನಡೆಸಿತು.

ಪಟ್ಟಣದ ತಾಲೂಕು ಕಚೇರಿ ಮುಂಭಾಗಕ್ಕೆ ಗ್ಯಾಸ್ ಸ್ಟೌವ್, ಬಟ್ಟೆ ಹಾಗೂ ಮನೆಯ ಇತರೆ ಅಗತ್ಯ ಸಾಮಗ್ರಿಗಳನ್ನು ತಂದು ಪ್ರತಿಭಟನೆ ನಡೆಸಿದ ಕುಟುಂಬದ ಸದಸ್ಯರು, ತಮಗೆ ನ್ಯಾಯ ದೊರೆಯುವವರೆಗೂ ಅಹೋರಾತ್ರಿ ಧರಣಿ ಮುಂದುವರಿಸುವುದಾಗಿ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಪ್ರತಿಭಟನಾಕಾರ ರಮೇಶ್ ಮಾತನಾಡಿ, ನಾವು ಹಲವು ವರ್ಷಗಳಿಂದ ಗ್ರಾಮದಲ್ಲಿ ವಾಸವಾಗಿದ್ದು, ನಿವೇಶನಕ್ಕೆ ಸಂಬಂಧಿಸಿದ ಅಗತ್ಯ ದಾಖಲೆಗಳನ್ನು ಹೊಂದಿದ್ದೇವೆ. ಹಳೆಯ ಮನೆಯನ್ನು ತೆರವುಗೊಳಿಸಿ ಅದೇ ಜಾಗದಲ್ಲಿ ನೂತನ ಮನೆ ನಿರ್ಮಿಸಿಕೊಳ್ಳುವ ಉದ್ದೇಶದಿಂದ ಪಾಯ ತೆಗೆಯಲು ಮುಂದಾದಾಗ ಗ್ರಾಮದ ಕೆಲ ಮುಖಂಡರು ವಿನಾಕಾರಣ ಅಡ್ಡಿಪಡಿಸುತ್ತಿದ್ದಾರೆ. ಮನೆ ನಿರ್ಮಿಸಬಾರದೆಂದು ಬೆದರಿಕೆ ಹಾಕುವುದರ ಜತೆಗೆ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಈ ಸಮಸ್ಯೆ ಕುರಿತು ಗ್ರಾಮ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಪೊಲೀಸ್ ಇಲಾಖೆಯ ಗಮನಕ್ಕೂ ಹಲವು ಬಾರಿ ತಂದಿದ್ದರೂ ಸಮಸ್ಯೆಗೆ ಪರಿಹಾರ ದೊರೆತಿಲ್ಲ. ಸ್ವಂತ ಜಾಗದಲ್ಲಿಯೇ ಮನೆ ನಿರ್ಮಿಸಿಕೊಳ್ಳಲು ಸಾಧ್ಯವಾಗದ ಪರಿಸ್ಥಿತಿ ಎದುರಾಗಿದೆ. ಹೀಗಾಗಿ ಅನಿವಾರ್ಯವಾಗಿ ತಾಲೂಕು ದಂಡಾಧಿಕಾರಿಗಳ ಕಚೇರಿ ಮುಂದೆ ಧರಣಿ ನಡೆಸಲು ನಿರ್ಧರಿಸಿದ್ದೇವೆ. ನಮಗೆ ನ್ಯಾಯ ದೊರೆಯುವವರೆಗೂ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂದು ತಿಳಿಸಿದರು.



ಪ್ರತಿಭಟನಾಕಾರ್ತಿ ಮಂಜಮ್ಮ ಮಾತನಾಡಿ, ಜಗಳೂರಯ್ಯ ಸೇರಿದಂತೆ ಇತರ ಕೆಲವರು ನಮ್ಮ ಕುಟುಂಬದ ಮೇಲೆ ದೌರ್ಜನ್ಯ ನಡೆಸುತ್ತಿದ್ದಾರೆ. ನಮ್ಮದು ಚಿಕ್ಕದಾದ ಮನೆ. ಒಂದೇ ಮನೆಯಲ್ಲಿ 11 ಮಂದಿ ವಾಸಿಸುತ್ತಿದ್ದೇವೆ. ಮಕ್ಕಳಿಗೆ ಓಡಾಡಲು ಹಾಗೂ ವಾಸಿಸಲು ಜಾಗದ ಕೊರತೆಯಿದೆ. ಕುಟುಂಬದ ಸದಸ್ಯರು ದುಡಿದು ಸ್ವಲ್ಪ ಹಣ ಕೂಡಿಟ್ಟಿದ್ದು, ಇದೀಗ ಮನೆ ನಿರ್ಮಿಸಿಕೊಳ್ಳಲು ಮುಂದಾಗಿದ್ದೇವೆ. ಆದರೆ, ಮನೆ ನಿರ್ಮಾಣಕ್ಕೆ ವಿನಾಕಾರಣ ಅಡ್ಡಿಪಡಿಸಿ ತೊಂದರೆ ನೀಡುತ್ತಿದ್ದಾರೆ ಎಂದು ಅಳಲು ತೋಡಿಕೊಂಡರು.

ಇದೇ ವೇಳೆ ಪ್ರತಿಭಟನೆ ನಡೆಯುತ್ತಿದ್ದ ಸ್ಥಳಕ್ಕೆ ಆಗಮಿಸಿದ ಸಿಪಿಐ ಅವರಿಂದಲೂ ತಮಗೆ ದೌರ್ಜನ್ಯವಾಗುತ್ತಿದೆ ಎಂದು ಮಂಜಮ್ಮ ಆರೋಪಿಸಿದರು.

ಬೆಳಗ್ಗೆಯಿಂದ ಸಂಜೆವರೆಗೂ ತಾಲೂಕು ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರೂ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಸಮಸ್ಯೆ ಆಲಿಸಿಲ್ಲ ಎಂದು ಪ್ರತಿಭಟನಾಕಾರರು ಅಸಮಾಧಾನ ವ್ಯಕ್ತಪಡಿಸಿದರು. ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ತಮ್ಮ ಸಮಸ್ಯೆಯನ್ನು ಆಲಿಸಿ ನ್ಯಾಯ ಒದಗಿಸುವವರೆಗೂ ಧರಣಿ ಮುಂದುವರಿಸುವುದಾಗಿ ಕುಟುಂಬದ ಸದಸ್ಯರು ತಿಳಿಸಿದ್ದಾರೆ.

ಮಕ್ಕಳ ಸುರಕ್ಷತೆಗೆ ಪೋಕ್ಸೋ ಕಾಯ್ದೆ ಕುರಿತು ಜಾಗೃತಿ ಅಗತ್ಯ: ಸಿಡಿಪಿಒ ಶಿವಕುಮಾರ್

ಗೌರಿಪುರ, ಹೊಸಕೆರೆ ಸರ್ಕಾರಿ ಪ್ರೌಢಶಾಲೆಗಳಲ್ಲಿ ಸುರಕ್ಷತಾ ಬಚ್ಚನ್ ಕಾರ್ಯಕ್ರಮ

"ಮುಂಜಾನೆಯ ಮೆರಗು"

ಜಗಳೂರು, ಅ.30: ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ, ಶೋಷಣೆ ಹಾಗೂ ಕಿರುಕುಳದಂತಹ ಘಟನೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಪೋಕ್ಸೋ ಕಾಯ್ದೆಯ ಕುರಿತು ಮಕ್ಕಳು, ಪೋಷಕರು ಹಾಗೂ ಸಾರ್ವಜನಿಕರಲ್ಲಿ ಸಮಗ್ರ ಜಾಗೃತಿ ಮೂಡಿಸುವುದು ಅತ್ಯಗತ್ಯವಾಗಿದೆ ಎಂದು ಸಿಡಿಪಿಒ ಶಿವಕುಮಾರ್ ತಿಳಿಸಿದರು.

ತಾಲ್ಲೂಕಿನ ಗೌರಿಪುರ ಹಾಗೂ ಹೊಸಕೆರೆ ಗ್ರಾಮಗಳ ಸರ್ಕಾರಿ ಪ್ರೌಢಶಾಲೆಗಳಲ್ಲಿ ಆಯೋಜಿಸಲಾಗಿದ್ದ ಸುರಕ್ಷತಾ ಬಚ್ಚನ್ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಕ್ಕಳ ಹಕ್ಕುಗಳ ರಕ್ಷಣೆ ಮತ್ತು ಅವರ ಸುರಕ್ಷಿತ ಭವಿಷ್ಯ ನಿರ್ಮಾಣಕ್ಕೆ ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಹೇಳಿದರು.

ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಗಂಭೀರ ಅಪರಾಧವಾಗಿದ್ದು, ಇಂತಹ ಪ್ರಕರಣಗಳನ್ನು ತಡೆಗಟ್ಟಲು ಜಾಗೃತಿಯೇ ಪ್ರಮುಖ ಅಸ್ತ್ರವಾಗಿದೆ. ಮಕ್ಕಳಿಗೆ ಚಿಕ್ಕ ವಯಸ್ಸಿನಿಂದಲೇ ತಮ್ಮ ದೇಹದ ಸುರಕ್ಷತೆ, ಒಳ್ಳೆಯ ಸ್ಪರ್ಶ ಮತ್ತು ಕೆಟ್ಟ ಸ್ಪರ್ಶದ ನಡುವಿನ ವ್ಯತ್ಯಾಸದ ಬಗ್ಗೆ ತಿಳಿಸಿಕೊಡಬೇಕು. ಅಪರಿಚಿತರಿಂದ ಮಾತ್ರವಲ್ಲದೆ ಪರಿಚಯಸ್ಥರಿಂದಲೂ ಮಕ್ಕಳಿಗೆ ಅಪಾಯ ಎದುರಾಗುವ ಸಾಧ್ಯತೆಗಳಿರುವುದರಿಂದ ಯಾವುದೇ ವ್ಯಕ್ತಿಯ ಅನುಚಿತ ವರ್ತನೆಯನ್ನು ನಿರ್ಲಕ್ಷಿಸಬಾರದು. ಮಕ್ಕಳು ಇಂತಹ ಘಟನೆಗಳನ್ನು ಮುಕ್ತವಾಗಿ ಪೋಷಕರು ಹಾಗೂ ಶಿಕ್ಷಕರ ಗಮನಕ್ಕೆ ತರುವಂತಹ ವಿಶ್ವಾಸದ ವಾತಾವರಣವನ್ನು ನಿರ್ಮಿಸಬೇಕು ಎಂದರು.



ಯಾರಾದರೂ ಅನುಚಿತವಾಗಿ ವರ್ತಿಸಿದರೆ, ಕಿರುಕುಳ ನೀಡಿದರೆ ಅಥವಾ ಲೈಂಗಿಕ ದೌರ್ಜನ್ಯಕ್ಕೆ ಪ್ರಯತ್ನಿಸಿದರೆ ಮಕ್ಕಳು ಭಯಪಡದೆ ಪೋಷಕರು, ಶಿಕ್ಷಕರು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಮಕ್ಕಳ ಸಹಾಯವಾಣಿ 1098ರ ಮೂಲಕವೂ ನೆರವು ಪಡೆಯಬಹುದು. ಮಕ್ಕಳ ಸುರಕ್ಷತೆಯ ವಿಚಾರದಲ್ಲಿ ನಿರ್ಲಕ್ಷ್ಯ ವಹಿಸದೆ ತಕ್ಷಣ ಸೂಕ್ತ ಕ್ರಮ ಕೈಗೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

2012ರಲ್ಲಿ ಜಾರಿಗೆ ಬಂದಿರುವ ಪೋಕ್ಸೋ ಕಾಯ್ದೆಯು 18 ವರ್ಷದೊಳಗಿನ ಮಕ್ಕಳನ್ನು ಲೈಂಗಿಕ ದೌರ್ಜನ್ಯ ಮತ್ತು ಶೋಷಣೆಯಿಂದ ರಕ್ಷಿಸುವ ಉದ್ದೇಶ ಹೊಂದಿದೆ. ಮಕ್ಕಳ ಮೇಲಿನ ಲೈಂಗಿಕ ಅಪರಾಧಗಳ ಕುರಿತು ಮಾಹಿತಿ ದೊರೆತಾಗ ಅದನ್ನು ಮುಚ್ಚಿಡದೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿ, ಕಾನೂನು ಕ್ರಮಕ್ಕೆ ಸಹಕರಿಸಬೇಕು. ಬಾಲ್ಯವಿವಾಹವೂ ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಭವಿಷ್ಯದ ಮೇಲೆ ಗಂಭೀರ ಪರಿಣಾಮ ಬೀರುವುದರಿಂದ ಅದರ ತಡೆಗೂ ಸಾರ್ವಜನಿಕರು ಮುಂದಾಗಬೇಕು ಎಂದು ಕರೆ ನೀಡಿದರು.

ಮಕ್ಕಳಿಗೆ ಸುರಕ್ಷಿತ ವಾತಾವರಣ ನಿರ್ಮಾಣವಾಗಲಿ:

ವಕೀಲರ ಸಂಘದ ತಾಲ್ಲೂಕು ಅಧ್ಯಕ್ಷ ಡಿ.ವಿ. ನಾಗಪ್ಪ ಮಾತನಾಡಿ, ಇಂದಿನ ದಿನಗಳಲ್ಲಿ ಮಕ್ಕಳ ಸುರಕ್ಷತೆ ಪ್ರತಿಯೊಬ್ಬರ ಆದ್ಯತೆಯಾಗಬೇಕು. ಶಾಲಾ–ಕಾಲೇಜುಗಳಲ್ಲಿ ಪೋಕ್ಸೋ ಕಾಯ್ದೆ ಹಾಗೂ ಮಕ್ಕಳ ಹಕ್ಕುಗಳ ಕುರಿತು ನಿರಂತರ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವುದರಿಂದ ಮಕ್ಕಳಲ್ಲಿ ಆತ್ಮವಿಶ್ವಾಸ ಮತ್ತು ಕಾನೂನಿನ ಅರಿವು ಮೂಡಿಸಲು ಸಾಧ್ಯವಾಗುತ್ತದೆ. ಮಕ್ಕಳು ಯಾವುದೇ ಸಮಸ್ಯೆ ಎದುರಿಸಿದಾಗ ಮುಕ್ತವಾಗಿ ಹೇಳಿಕೊಳ್ಳುವಂತಹ ಸ್ನೇಹಪರ ವಾತಾವರಣವನ್ನು ಶಿಕ್ಷಕರು ಹಾಗೂ ಪೋಷಕರು ಕಲ್ಪಿಸಬೇಕು. ಮಕ್ಕಳಿಗೆ ಸುರಕ್ಷಿತ ಪರಿಸರ ಒದಗಿಸುವ ಮೂಲಕ ಅವರ ಭವಿಷ್ಯವನ್ನು ರಕ್ಷಿಸುವುದು ಎಲ್ಲರ ಕರ್ತವ್ಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಸುರಕ್ಷತಾ ಬಚ್ಚನ್ ಅಭಿಯಾನದ ಕುರಿತು ಜಾಗೃತಿ ಭಿತ್ತಿಚಿತ್ರವನ್ನು ಅನಾವರಣಗೊಳಿಸಿ, ವಿದ್ಯಾರ್ಥಿಗಳಿಗೆ ಮಕ್ಕಳ ಸುರಕ್ಷತೆ, ಹಕ್ಕುಗಳು ಹಾಗೂ ಕಾನೂನು ರಕ್ಷಣೆಯ ಕುರಿತು ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಸಿಡಿಪಿಒ ಮೇಲ್ವಿಚಾರಕಿ ಎಚ್.ವಿ. ಶಾಂತಮ್ಮ, ಶಾಲೆಗಳ ಮುಖ್ಯಶಿಕ್ಷಕರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಅಪರಾಧ ಮುಕ್ತ ಸಮಾಜ ನಿರ್ಮಾಣಕ್ಕೆ ಕಾನೂನು ಅರಿವು ಅಗತ್ಯ: ವಕೀಲ ತಿಪ್ಪೇಸ್ವಾಮಿ ಎಸ್.

ಹನುಮಂತಾಪುರದ ರಾಜೀವ್ ಗಾಂಧಿ ಸ್ಮಾರಕ ಪ್ರೌಢಶಾಲೆಯಲ್ಲಿ ಪೋಕ್ಸೋ ಕಾಯ್ದೆ ಕುರಿತು ಜಾಗೃತಿ

"ಮುಂಜಾನೆಯ ಮೆರಗು"

ಜಗಳೂರು ಅ, 30– ವಿದ್ಯಾರ್ಥಿ ಜೀವನದ ಹಂತದಲ್ಲಿಯೇ ಪ್ರತಿಯೊಬ್ಬರೂ ಪೋಕ್ಸೋ ಕಾಯ್ದೆ ಸೇರಿದಂತೆ ದೇಶದ ವಿವಿಧ ಕಾನೂನುಗಳ ಕುರಿತು ಕನಿಷ್ಠ ಪ್ರಾಥಮಿಕ ಜ್ಞಾನ ಹೊಂದುವುದು ಅತ್ಯಗತ್ಯ. ಕಾನೂನಿನ ಅರಿವು ಮೂಡಿದಾಗ ಮಾತ್ರ ಅಪರಾಧಗಳನ್ನು ತಡೆಗಟ್ಟುವುದರ ಜೊತೆಗೆ ಅಪರಾಧ ಮುಕ್ತ ಸಮಾಜ ನಿರ್ಮಿಸಲು ಸಾಧ್ಯ ಎಂದು ವಕೀಲ ತಿಪ್ಪೇಸ್ವಾಮಿ ಎಸ್. ತಿಳಿಸಿದರು.

ತಾಲ್ಲೂಕಿನ ಹನುಮಂತಾಪುರ ಗ್ರಾಮದ ರಾಜೀವ್ ಗಾಂಧಿ ಸ್ಮಾರಕ ಪ್ರೌಢಶಾಲೆಯಲ್ಲಿ ಸುರಕ್ಷಿತ್ ಬಚ್ಚನ್ ಅಭಿಯಾನ ಹಾಗೂ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮದಡಿ ವಿದ್ಯಾರ್ಥಿಗಳಿಗೆ ಪೋಕ್ಸೋ ಕಾಯ್ದೆ ಕುರಿತು ಜಾಗೃತಿ ಮೂಡಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಭವಿಷ್ಯದಲ್ಲಿ ಜವಾಬ್ದಾರಿಯುತ ನಾಗರಿಕರಾಗಿ ರೂಪುಗೊಳ್ಳಲು ಕಾನೂನಿನ ಪ್ರಾಥಮಿಕ ಜ್ಞಾನ ಹೊಂದಿರಬೇಕು. ಯಾವುದು ಅಪರಾಧ, ಯಾವುದು ಕಾನೂನುಬಾಹಿರ ಚಟುವಟಿಕೆ ಎಂಬುದರ ಅರಿವು ಇದ್ದಾಗ ತಪ್ಪು ದಾರಿಯಲ್ಲಿ ಸಾಗುವುದನ್ನು ತಡೆಯಬಹುದು. ಇತ್ತೀಚಿನ ದಿನಗಳಲ್ಲಿ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳು ಹೆಚ್ಚುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಆದ್ದರಿಂದ ಪ್ರಾಥಮಿಕ ಮತ್ತು ಪ್ರೌಢಶಾಲಾ ಹಂತದಿಂದಲೇ ಮಕ್ಕಳಿಗೆ ಪೋಕ್ಸೋ ಕಾಯ್ದೆಯ ಕುರಿತು ಅರಿವು ಮೂಡಿಸುವುದು ಅಗತ್ಯವಾಗಿದೆ ಎಂದರು.

ಪೋಕ್ಸೋ ಕಾಯ್ದೆಯಡಿ ಭೇದಕ ಲೈಂಗಿಕ ದೌರ್ಜನ್ಯ, ಗಂಭೀರ ಭೇದಕ ಲೈಂಗಿಕ ದೌರ್ಜನ್ಯ, ಲೈಂಗಿಕ ದೌರ್ಜನ್ಯ, ಲೈಂಗಿಕ ಕಿರುಕುಳ ಹಾಗೂ ಮಕ್ಕಳನ್ನು ಅಶ್ಲೀಲ ಉದ್ದೇಶಗಳಿಗೆ ಬಳಸಿಕೊಳ್ಳುವುದು ಸೇರಿದಂತೆ ವಿವಿಧ ಅಪರಾಧಗಳು ಶಿಕ್ಷಾರ್ಹವಾಗಿವೆ. ಇಂತಹ ಅಪರಾಧಗಳ ಸ್ವರೂಪ ಮತ್ತು ಅವುಗಳಿಗೆ ಸಂಬಂಧಿಸಿದ ಕಾನೂನು ಕ್ರಮಗಳ ಬಗ್ಗೆ ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು ಎಂದು ಹೇಳಿದರು.

ಮಕ್ಕಳ ಮೇಲೆ ಯಾವುದೇ ರೀತಿಯ ಲೈಂಗಿಕ ದೌರ್ಜನ್ಯ ಅಥವಾ ಕಿರುಕುಳ ನಡೆದ ಸಂದರ್ಭದಲ್ಲಿ ಭಯದಿಂದ ಅಥವಾ ಮುಜುಗರದಿಂದ ಅದನ್ನು ಮುಚ್ಚಿಡಬಾರದು. ಧೈರ್ಯವಾಗಿ



ಪೋಷಕರು, ಶಿಕ್ಷಕರು ಅಥವಾ ವಿಶ್ವಾಸಾರ್ಹ ವ್ಯಕ್ತಿಗಳ ಗಮನಕ್ಕೆ ತರಬೇಕು. ಅಗತ್ಯವಿದ್ದಲ್ಲಿ ಪೊಲೀಸ್ ಠಾಣೆಗೆ ದೂರು ನೀಡಬೇಕು. ಮಕ್ಕಳಿಗೆ ಕಾನೂನಿನ ರಕ್ಷಣೆ ದೊರೆಯುವಂತೆ ಸಂಬಂಧಪಟ್ಟ ಇಲಾಖೆಗಳು ಕ್ರಮ ಕೈಗೊಳ್ಳಲಿದ್ದು, ಸಂತ್ರಸ್ತ ಮಕ್ಕಳಿಗೆ ನ್ಯಾಯ ಒದಗಿಸಲು ಕಾನೂನಿನಲ್ಲಿ ಸೂಕ್ತ ಅವಕಾಶಗಳಿವೆ ಎಂದು ತಿಳಿಸಿದರು.

ಶಾಲೆಯ ಮುಖ್ಯೋಪಾಧ್ಯಾಯ ಎನ್.ಎಸ್. ತಿಪ್ಪೇಸ್ವಾಮಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮೊಬೈಲ್ ಬಳಕೆಯ ವ್ಯಾಮೋಹದಿಂದಾಗಿ ಮಕ್ಕಳು ಹಲವು ರೀತಿಯ ಸಮಸ್ಯೆಗಳಿಗೆ ಸಿಲುಕುತ್ತಿರುವ ಉದಾಹರಣೆಗಳಿವೆ. ಮೊಬೈಲ್ ಬಳಸುವುದು ತಪ್ಪಲ್ಲ, ಆದರೆ ಅದನ್ನು ಯಾವ ಉದ್ದೇಶಕ್ಕಾಗಿ ಬಳಸುತ್ತೇವೆ ಎಂಬುದು ಮುಖ್ಯ. ವಿದ್ಯಾರ್ಥಿಗಳು ಅನಗತ್ಯ ಮೊಬೈಲ್ ಬಳಕೆಯಿಂದ ದೂರವಿದ್ದು, ಪುಸ್ತಕ ಓದು, ವಿದ್ಯಾಭ್ಯಾಸ ಹಾಗೂ ಉತ್ತಮ ಚಟುವಟಿಕೆಗಳ ಕಡೆಗೆ ಹೆಚ್ಚಿನ ಆಸಕ್ತಿ ಬೆಳೆಸಿಕೊಳ್ಳಬೇಕು. ಎಂದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಆರ್. ತಿಪ್ಪೇಸ್ವಾಮಿ, ಚೆನ್ನವೀರಪ್ಪ, ಸತೀಶ್, ನಾಗರಾಜ್ ಹಾಗೂ ಸಿಬ್ಬಂದಿ ಮಂಜಪ್ಪ ಉಪಸ್ಥಿತರಿದ್ದರು.

ಬ್ಯಾಂಕ್‌ಗಳು ದೇವರಿಗೆ ಸಮಾನ; ಪಡೆದ ಸಾಲವನ್ನು ಸಕಾಲಕ್ಕೆ ಮರುಪಾವತಿಸಿ: ಹೆಚ್. ಮಹಾಲಿಂಗಪ್ಪ

ಜಗಳೂರಿನಲ್ಲಿ ಕರ್ನಾಟಕ ಬ್ಯಾಂಕ್‌ನ ನೂತನ ಶಾಖೆ ಲೋಕಾರ್ಪಣೆ; ಗ್ರಾಹಕರಿಗೆ ಉತ್ತಮ ಸೇವೆ ನೀಡುವ ಭರವಸೆ

"ಮುಂಜಾನೆಯ ಮೆರಗು"

ಜಗಳೂರು, ಅ.30– ಕಷ್ಟದ ಸಂದರ್ಭದಲ್ಲಿ ದೇವರನ್ನು ನೆನೆಯುವಂತೆ ಆರ್ಥಿಕ ಸಂಕಷ್ಟ ಎದುರಾದಾಗ ಬ್ಯಾಂಕ್‌ಗಳ ನೆರವು ಪಡೆಯುತ್ತೇವೆ. ಆದ್ದರಿಂದ ಬ್ಯಾಂಕ್‌ಗಳು ಗ್ರಾಹಕರ ಪಾಲಿಗೆ ದೇವರಿಗೆ ಸಮಾನವಾಗಿದ್ದು, ಬ್ಯಾಂಕ್‌ನಿಂದ ಪಡೆದ ಸಾಲವನ್ನು ಸಕಾಲಕ್ಕೆ ಮರುಪಾವತಿ ಮಾಡುವುದು ಪ್ರತಿಯೊಬ್ಬ ಗ್ರಾಹಕರ ಕರ್ತವ್ಯವಾಗಿದೆ ಎಂದು ಶಾಮನೂ ಎಜುಕೇಷನ್ ಟ್ರಸ್ಟ್ ಅಧ್ಯಕ್ಷ ಹೆಚ್. ಮಹಾಲಿಂಗಪ್ಪ ತಿಳಿಸಿದರು.

ಪಟ್ಟಣದ ಪಿಎಲ್‌ಡಿ ಬ್ಯಾಂಕ್ ಎದುರು ಶುಕ್ರವಾರ ಕರ್ನಾಟಕ ಬ್ಯಾಂಕ್‌ನ ನೂತನ ಶಾಖೆಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಬ್ಯಾಂಕ್‌ನಿಂದ ಸಾಲ ಪಡೆಯುವುದು ಸುಲಭವಾದರೂ ಅದನ್ನು ಜವಾಬ್ದಾರಿಯಿಂದ ಬಳಸಿಕೊಂಡು ನಿಗದಿತ ಅವಧಿಯಲ್ಲಿ ಮರುಪಾವತಿ ಮಾಡಬೇಕು. ಗ್ರಾಹಕರು ಸಕಾಲದಲ್ಲಿ ಸಾಲ ಮರುಪಾವತಿ ಮಾಡಿದರೆ ಬ್ಯಾಂಕ್‌ಗಳಿಂದ ಮುಂದೆಯೂ ಉತ್ತಮ ಸಹಕಾರ ದೊರೆಯಲಿದೆ. ಪಡೆದ ಸಾಲವನ್ನು ದೇವರ ದುಡ್ಡೆಂದು ಭಾವಿಸಿ ಅನಗತ್ಯವಾಗಿ ಖರ್ಚು ಮಾಡದೆ, ಅಭಿವೃದ್ಧಿ ಕಾರ್ಯಗಳಿಗೆ ಸದ್ಬಳಕೆ ಮಾಡಿಕೊಳ್ಳಬೇಕು. ಬ್ಯಾಂಕ್ ಸಿಬ್ಬಂದಿ ಗ್ರಾಹಕರಿಗೆ ಉತ್ತಮ ಸಹಕಾರ ನೀಡುವ ಮೂಲಕ ಆರ್ಥಿಕ ಪ್ರಗತಿಗೆ ನೆರವಾಗುತ್ತಾರೆ. ಅನೇಕ ಬ್ಯಾಂಕ್‌ಗಳು ಸಾಲ ನೀಡುತ್ತವೆ, ಆದರೆ ಕರ್ನಾಟಕ ಬ್ಯಾಂಕ್ ಗ್ರಾಹಕರನ್ನು ಹಾರೈಸಿ, ಆತ್ಮೀಯತೆಯಿಂದ ಸಾಲ ನೀಡುವ ಸೇವಾ ಮನೋಭಾವ ಹೊಂದಿದೆ ಎಂದರು.



ನಾನು ತಿಪ್ಪೆಯ ಮೇಲಿರುವ ಅಣಬೆಯಂತೆ ಸಾಮಾನ್ಯ ವ್ಯಕ್ತಿಯಾಗಿದ್ದರೂ ಇಂತಹ ಪ್ರತಿಷ್ಠಿತ ಬ್ಯಾಂಕ್ ಶಾಖೆಯನ್ನು ಉದ್ಘಾಟಿಸುವ ಭಾಗ್ಯ ದೊರೆತಿರುವುದು ಸಂತೋಷದ ಸಂಗತಿ ಎಂದು ಹರ್ಷ ವ್ಯಕ್ತಪಡಿಸಿದರು.

ಕರ್ನಾಟಕ ಬ್ಯಾಂಕ್ ಜನರಲ್ ಮ್ಯಾನೇಜರ್ ಸಿ.ಎಲ್. ರಾಘವೇಂದ್ರ ಮಾತನಾಡಿ, ಬ್ಯಾಂಕ್ ಕೇವಲ ಲಾಭ ಗಳಿಸುವ ಉದ್ದೇಶದಿಂದ ಸ್ಥಾಪನೆಯಾದ ಸಂಸ್ಥೆಯಲ್ಲ. ಗ್ರಾಹಕರಿಗೆ ಗುಣಮಟ್ಟದ ಸೇವೆ ನೀಡುವುದರ ಜೊತೆಗೆ ಸಮಾಜದ ಆರ್ಥಿಕ ಅಭಿವೃದ್ಧಿಗೆ ಕೊಡುಗೆ ನೀಡುವ ಆಶಯ ಹೊಂದಿದೆ. ಒಂಬತ್ತು ಜನ ಪ್ರಗತಿಪರರು ಸೇರಿ ಆರಂಭಿಸಿದ ಸಂಸ್ಥೆ ಇಂದು ದೇಶಾದ್ಯಂತ ವಿಸ್ತರಿಸಿದೆ. ಕೇವಲ 11 ಸಾವಿರ ರೂಪಾಯಿ ಬಂಡವಾಳದೊಂದಿಗೆ ಆರಂಭವಾದ ಬ್ಯಾಂಕ್ ಇಂದು ಗ್ರಾಹಕರ ವಿಶ್ವಾಸ ಗಳಿಸಿ ಬೆಳೆದಿದೆ. ನಗುಮೊಗದ ಸೇವೆಗೆ ಆದ್ಯತೆ ನೀಡುವ ನಮ್ಮ ಬ್ಯಾಂಕ್ ಎಲ್ಲ ರೀತಿಯ ಆಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡಿದೆ. ಶಿವಮೊಗ್ಗ ವಲಯದ 88ನೇ ಹಾಗೂ ದೇಶದ 939ನೇ ಶಾಖೆಯಾಗಿ ಜಗಳೂರಿನಲ್ಲಿ ನೂತನ ಶಾಖೆ ಆರಂಭವಾಗಿದೆ ಎಂದು ತಿಳಿಸಿದರು.

ಬ್ಯಾಂಕ್‌ನ ಎಜಿಎಂ ಸಂಜೀವ್ ಕುಮಾರ್ ಮಾತನಾಡಿ, ಐದು ಬ್ಯಾಂಕ್‌ಗಳು ಏಕಕಾ